ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 164 Pages : 4+2 Rate : 3.00 Sunday August 02, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಇಥೆನಾಲ್ ಯೋಜನೆ ಸ್ಥಳಾಂತರದ ಬಗ್ಗೆ ಮಾಜಿ ಸಚಿವ ಮುರುಗೇಶ ನಿರಾಣಿ ಆರೋಪ

# ಉದ್ಯಮಿಗಳಿಗೆ ಕರ್ನಾಟಕದಲ್ಲಿ ಪ್ರೋತ್ಸಾಹವೇ ಇಲ್ಲ



**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕದಲ್ಲಿ ಗೋವಿನಜೋಳ ಆಧಾರಿತ ₹6 ಸಾವಿರ ಕೋಟಿ ವೆಚ್ಚದ ಇಥೆನಾಲ್ ಉತ್ಪಾದನಾ ಘಟಕ ಸ್ಥಾಪಿಸಲು ಉದ್ದೇಶಿಸಲಾಗಿತ್ತು. ಆದರೆ ರಾಜ್ಯ ಸರ್ಕಾರ ಅನುಮತಿ ನೀಡದ ಹಿನ್ನೆಲೆಯಲ್ಲಿ ಯೋಜನೆಯನ್ನು ಮಹಾರಾಷ್ಟ್ರ ಮತ್ತು ಆಂಧ್ರಪ್ರದೇಶಕ್ಕೆ ಸ್ಥಳಾಂತರಿಸಲಾಗಿದೆ ಎಂದು ಮಾಜಿ ಸಚಿವ ಮುರುಗೇಶ ನಿರಾಣಿ ಆರೋಪಿಸಿದರು.

ನಗರದ ರೋಟರಿ ವೃತ್ತದ ಮಾನ್ವಿ ಕಟ್ಟಡದಲ್ಲಿ ವಿಜಯ ಎಂಆರ್‌ಎನ್ ಸೌಹಾರ್ದ ಕ್ರೆಡಿಟ್ ಸಹಕಾರ ಸಂಘ ನಿಯಮಿತದ 73ನೇ ಶಾಖೆ ಉದ್ಘಾಟನೆ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಕರ್ನಾಟಕದಲ್ಲಿ ಕೈಗಾರಿಕೆ ಸ್ಥಾಪಿಸಲು ಉದ್ಯಮಿಗಳಿಗೆ ಅಗತ್ಯ ಬೆಂಬಲ ಮತ್ತು ಪ್ರೋತ್ಸಾಹ ದೊರೆಯುತ್ತಿಲ್ಲ. ಇದೇ ಕಾರಣಕ್ಕೆ ಇತರೆ ರಾಜ್ಯಗಳು ಭೂಮಿ, ಸಬ್ಸಿಡಿ ಸೇರಿದಂತೆ ವಿವಿಧ ಸೌಲಭ್ಯಗಳನ್ನು ನೀಡಿ ಬಂಡವಾಳ ಹೂಡಿಕೆಗಳನ್ನು ಸೆಳೆಯುತ್ತಿವೆ. ಪರಿಣಾಮ ರಾಜ್ಯದ ರೈತರು ಮತ್ತು ಯುವಕರಿಗೆ ದೊರೆಯಬೇಕಿದ್ದ ಉದ್ಯೋಗಾವಕಾಶಗಳು ಹೊರರಾಜ್ಯಗಳಿಗೆ ವರ್ಗವಾಗುತ್ತಿವೆ ಎಂದು ಹೇಳಿದರು.

ರಾಜ್ಯ ಸರ್ಕಾರ ವಿದೇಶಿ ಉದ್ಯಮಿಗಳನ್ನು ಆಹ್ವಾನಿಸಲು ಕೋಟ್ಯಂತರ ರೂಪಾಯಿ ವೆಚ್ಚ ಮಾಡುತ್ತಿದೆ. ಆದರೆ ಕನ್ನಡಿಗ ಉದ್ಯಮಿಗಳಿಗೆ ಸೂಕ್ತ ಅವಕಾಶ ಕಲ್ಪಿಸುತ್ತಿಲ್ಲ ಎಂದು ಅವರು ಟೀಕಿಸಿದರು.

ನಿರಾಣಿ ಗ್ರೂಪ್ ದೇಶದ ಅಗ್ರ ಸಕ್ಕರೆ ಉತ್ಪಾದನಾ ಸಂಸ್ಥೆಗಳಲ್ಲಿ ಒಂದಾಗಿದ್ದು, ಪ್ರತಿದಿನ 30 ಲಕ್ಷ ಲೀಟರ್ ಇಥೆನಾಲ್ ಹಾಗೂ 400 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸುತ್ತಿದೆ.

ಗ್ರೀನ್ ಹೈಡ್ರೋಜನ್, ಕಂಪ್ರೆಸ್ಡ್ ಬಯೋ ಗ್ಯಾಸ್ (ಸಿಬಿಜಿ), ಶಿಕ್ಷಣ, ಸಿಮೆಂಟ್ ಹಾಗೂ ಬ್ಯಾಂಕಿಂಗ್ ಕ್ಷೇತ್ರಗಳಲ್ಲೂ ಕಾರ್ಯನಿರ್ವಹಿಸುತ್ತಿದ್ದು, ಬಿಹಾರದಲ್ಲಿ ಸಾವಿರಾರು ಕೋಟಿ ರೂಪಾಯಿ ವೆಚ್ಚದ ಹೊಸ ಯೋಜನೆಗೆ ಸರ್ಕಾರದಿಂದ ಉತ್ತಮ ಪ್ರೋತ್ಸಾಹ ದೊರೆಯುತ್ತಿದೆ ಎಂದರು.

ಮೆಕ್ಕೆಜೋಳ, ಕಬ್ಬು ಹಾಗೂ ಅಕ್ಕಿಯಿಂದ ಇಥೆನಾಲ್ ಉತ್ಪಾದನೆಯಿಂದ ರೈತರಿಗೆ ಉತ್ತಮ ಬೆಲೆ ದೊರೆಯಲಿದೆ.

ಅದರ ಉಪ ಉತ್ಪನ್ನ ಜಾನುವಾರುಗಳಿಗೆ ಗುಣಮಟ್ಟದ ಆಹಾರವಾಗಲಿದ್ದು, ಹಾಲಿನ ಉತ್ಪಾದನೆಯೂ ಹೆಚ್ಚಲಿದೆ. ಇಥೆನಾಲ್ ಮಿಶ್ರಿತ ಇಂಧನದಿಂದ ಕಚ್ಚಾ ತೈಲ ಆಮದು ವೆಚ್ಚ ಕಡಿಮೆಯಾಗುವುದರೊಂದಿಗೆ ದೇಶದ ಆರ್ಥಿಕತೆಗೆ ಲಾಭವಾಗಲಿದೆ ಎಂದು ಹೇಳಿದರು.

**ಬರ ಪರಿಸ್ಥಿತಿ: ಸಾಲ ಮನ್ನಾಗೆ ಆಗ್ರಹ**

ರಾಜ್ಯದಲ್ಲಿ ಮಳೆ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದಾರೆ. ಬೆಳೆಗಳು ಹಾನಿಗೀಡಾಗಿದ್ದು, ಅನೇಕ ಕಡೆ ಕೃಷಿ ಭೂಮಿಯೇ ಖಾಲಿ ಉಳಿದಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ರೈತರ ಸಾಲ ಮನ್ನಾ ಮಾಡಿ ನೆರವಿಗೆ ಬರಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಶಾಸಕ ಸಿ.ಸಿ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಕುರಡಗಿ, ಬಿಜೆಪಿ ಮುಖಂಡರಾದ ಎಂ.ಎಸ್. ಕರಿಗೌಡ್ರ, ವಿಜಯಕುಮಾರ್ ಗಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.


> ಕರ್ನಾಟಕದಲ್ಲಿ ಅನುಮತಿ ಸಿಗದ ಕಾರಣ ₹6 ಸಾವಿರ ಕೋಟಿ ಇಥೆನಾಲ್ ಯೋಜನೆಯನ್ನು ಮಹಾರಾಷ್ಟ್ರ ಮತ್ತು ಆಂಧ್ರಪ್ರದೇಶಕ್ಕೆ ಸ್ಥಳಾಂತರಿಸಿದ್ದೇವೆ. ರಾಜ್ಯ ಸರ್ಕಾರ ಸ್ಥಳೀಯ ಉದ್ಯಮಿಗಳಿಗೂ ಸಮಾನ ಪ್ರೋತ್ಸಾಹ ನೀಡಬೇಕು.
>
> – **ಮುರುಗೇಶ ನಿರಾಣಿ,** ಮಾಜಿ ಸಚಿವ

## 2028ರಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ

2028ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯನ್ನು ಮತ್ತೆ ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಪಕ್ಷ ಸಂಘಟನೆ ನಡೆಯುತ್ತಿದೆ. ಪಕ್ಷದ ರಾಜ್ಯಾಧ್ಯಕ್ಷರು ಯಾರೇ ಆಗಿದ್ದರೂ ಅವರ ನೇತೃತ್ವದಲ್ಲಿ ಕಾರ್ಯನಿರ್ವಹಿಸಲಾಗುವುದು. ಕೆ.ಎಸ್. ಈಶ್ವರಪ್ಪ ಹಾಗೂ ಬಸನಗೌಡ ಪಾಟೀಲ ಯತ್ನಾಳ್ ಪಕ್ಷದ ಮುಖ್ಯವಾಹಿನಿಗೆ ಬಂದರೆ ಬಿಜೆಪಿಗೆ ಮತ್ತಷ್ಟು ಬಲ ಬರಲಿದೆ. ಕಾಂಗ್ರೆಸ್‌ನ ಅಸಮಾಧಾನಿತ ಶಾಸಕರೂ ಮುಂದಿನ ದಿನಗಳಲ್ಲಿ ಬಿಜೆಪಿಗೆ ಸೇರ್ಪಡೆಯಾಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ಹೆಣ್ಣು ಭ್ರೂಣ ಹತ್ಯೆ ತಡೆಗೆ ಜಿಲ್ಲಾಡಳಿತಕ್ಕೆ ಕಟ್ಟುನಿಟ್ಟಿನ ನಿರ್ದೇಶನ: ಡಾ. ನಾಗಲಕ್ಷ್ಮಿ ಚೌಧರಿ

## ವಿದ್ಯಾರ್ಥಿನಿ ಸಾವು ಪ್ರಕರಣದ ಸಮಗ್ರ ತನಿಖೆಗೆ ಗೃಹ ಇಲಾಖೆಗೆ ಪತ್ರ



**ವಿಜಯಸಾಕ್ಷಿ ಸುದ್ದಿ, ಗದಗ**

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ವಿಶ್ವವಿದ್ಯಾಲಯದಲ್ಲಿ ನಡೆದ ವಿದ್ಯಾರ್ಥಿನಿ ಸಾವು ಪ್ರಕರಣದ ಸಮಗ್ರ ತನಿಖೆಗೆ ಗೃಹ ಇಲಾಖೆಗೆ ಪತ್ರ ಬರೆದು, ಖುದ್ದು ಭೇಟಿ ನೀಡಿ ಮನವಿ ಸಲ್ಲಿಸಲಾಗುವುದು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ತಿಳಿಸಿದರು.

ಶನಿವಾರ ಜಿಲ್ಲಾಡಳಿತ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಕರಣದ ತನಿಖೆಯಲ್ಲಿ ಯಾವುದೇ ನಿರ್ಲಕ್ಷ್ಯ ಕಂಡುಬಂದರೆ ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದರು.

ಮೃತ ವಿದ್ಯಾರ್ಥಿನಿಯ ಕುಟುಂಬವು ಕೊಲೆ ಆರೋಪ ಮಾಡಿದ್ದು, ವಸತಿ ನಿಲಯದ ಸಿಸಿ ಟಿವಿ ದೃಶ್ಯಾವಳಿಯ ಒಂದು ತಿಂಗಳ ಬ್ಯಾಕ್‌ಅಪ್ ಇಲ್ಲ ಎಂಬ ಮಾಹಿತಿ ಲಭ್ಯವಾಗಿದೆ. ದೂರು ದಾಖಲಿಸುವ ವೇಳೆ ಪೊಲೀಸರಿಂದ ಒತ್ತಡ ಹೇರಲಾಗಿದೆ ಎಂಬ ಆರೋಪವೂ ಕೇಳಿಬಂದಿದ್ದು, ಪೊಲೀಸ್ ಠಾಣೆಯ ಸಿಸಿ ಟಿವಿ ದೃಶ್ಯಾವಳಿಯನ್ನೂ ಪರಿಶೀಲಿಸಲಾಗುವುದು ಎಂದು ಹೇಳಿದರು. ರೋಣ ತಾಲೂಕು ಆಸ್ಪತ್ರೆ ಹಾಗೂ ಗದಗಿನ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಗಂಡು ಮಕ್ಕಳ ಜನನ ಪ್ರಮಾಣ ಹೆಚ್ಚಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಹೆಣ್ಣು ಭ್ರೂಣ ಹತ್ಯೆ ತಡೆಯಲು ಜಿಲ್ಲಾಡಳಿತ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದರು.ರೋಣ ತಾಲೂಕು ಆಸ್ಪತ್ರೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಬೇಕು. ಮಹಿಳೆಯರ ಸಮಸ್ಯೆಗಳಿಗೆ ಸ್ಥಳೀಯ ಮಟ್ಟದಲ್ಲೇ ಸ್ಪಂದಿಸಲು ಮಹಿಳಾ ಗ್ರಾಮಸಭೆಗಳನ್ನು ನಿಯಮಿತವಾಗಿ ನಡೆಸಬೇಕು. ಜೊತೆಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಹಿಳೆಯರ ಅಹವಾಲು ಆಲಿಸಲು ತಿಂಗಳಿಗೆ ಒಂದು ದಿನ ಮೀಸಲಿಡುವಂತೆ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ತಿಳಿಸಿದರು.

ಎರಡು ದಿನಗಳ ಜಿಲ್ಲಾ ಪ್ರವಾಸದಲ್ಲಿ ವಸತಿ ನಿಲಯಗಳು, ಆಸ್ಪತ್ರೆಗಳು, ಪೊಲೀಸ್ ಠಾಣೆ, ಮಕ್ಕಳ ದತ್ತು ಕೇಂದ್ರ, ಅಲೆಮಾರಿ ಸಮುದಾಯದ ನಿವಾಸಗಳು, ಕೃಷಿ ಕಾರ್ಮಿಕರು ಹಾಗೂ ಕುರಿಗಾಹಿಗಳನ್ನು ಭೇಟಿ ಮಾಡಿ ಸಮಸ್ಯೆಗಳನ್ನು ಆಲಿಸಲಾಗಿದೆ. ಅಲೆಮಾರಿ ಸಮುದಾಯಕ್ಕೆ ಕುಡಿಯುವ ನೀರು, ರಸ್ತೆ, ಶೌಚಾಲಯ ಹಾಗೂ ಗ್ರಂಥಾಲಯ ಸೇರಿದಂತೆ ಮೂಲಸೌಕರ್ಯಗಳನ್ನು ಕಲ್ಪಿಸುವ ಅಗತ್ಯವಿದೆ ಎಂದು ಹೇಳಿದರು.ಅಹವಾಲು ಸ್ವೀಕಾರ ಸಭೆಯಲ್ಲಿ ಸಾವಿರಕ್ಕೂ ಹೆಚ್ಚು ಮಹಿಳೆಯರು ಭಾಗವಹಿಸಿದ್ದರು. ದೇವದಾಸಿಯರು, ಅಲೆಮಾರಿ ಸಮುದಾಯದವರು, ಲಿಂಗತ್ವ ಅಲ್ಪಸಂಖ್ಯಾತರು ಸೇರಿದಂತೆ ಹಲವರು ಉದ್ಯೋಗ, ಮನೆ, ಪಿಂಚಣಿ, ಮೂಲಸೌಕರ್ಯ ಹಾಗೂ ಕೌಟುಂಬಿಕ ಸಮಸ್ಯೆಗಳ ಕುರಿತು ಮನವಿ ಸಲ್ಲಿಸಿದ್ದಾರೆ. ಮನೆ ಸೌಲಭ್ಯಕ್ಕಾಗಿ ಬಂದ 66 ಅರ್ಜಿಗಳನ್ನು ವಿವಿಧ ವಸತಿ ಯೋಜನೆಗಳಲ್ಲಿ ಆದ್ಯತೆಯ ಮೇರೆಗೆ ಪರಿಗಣಿಸಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಕಾರ್ಯದರ್ಶಿ ರೂಪಾ ಉಪಸ್ಥಿತರಿದ್ದರು.

> ವಿದ್ಯಾರ್ಥಿನಿ ಸಾವು ಪ್ರಕರಣದ ಸಮಗ್ರ ತನಿಖೆಗೆ ಗೃಹ ಇಲಾಖೆಗೆ ಪತ್ರ ಬರೆಯುತ್ತೇನೆ. ಮಹಿಳೆಯರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ಸಿಗುವಂತೆ ಮಹಿಳಾ ಗ್ರಾಮಸಭೆಗಳನ್ನು ನಿಯಮಿತವಾಗಿ ನಡೆಸಬೇಕು.
>
> – **ಡಾ. ನಾಗಲಕ್ಷ್ಮಿ ಚೌಧರಿ,** ಅಧ್ಯಕ್ಷೆ, ಕರ್ನಾಟಕ ರಾಜ್ಯ ಮಹಿಳಾ ಆಯೋಗ

## ನಾಳೆ ಗದಗ ನಗರ, ಗ್ರಾಮೀಣ ಭಾಗದಲ್ಲಿ ವಿದ್ಯುತ್ ವ್ಯತ್ಯಯ

**ವಿಜಯಸಾಕ್ಷಿ ಸುದ್ದಿ, ಗದಗ**

110 ಕೆವಿ ಗದಗ ಉಪವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಆಗಸ್ಟ್ 3ರಂದು ಮಧ್ಯಾಹ್ನ 12ರಿಂದ 3 ಗಂಟೆಯವರೆಗೆ ಗದಗ ನಗರ ಹಾಗೂ ಗ್ರಾಮೀಣ ಭಾಗದ ಹಲವು ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. 110 ಕೆವಿ ಗದಗ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುವ 33 ಕೆವಿ ಮಾರ್ಗಗಳಾದ ಹುಲಕೋಟಿ, ಲಕ್ಕುಂಡಿ, ಮಲ್ಲಸಮುದ್ರ, ನಾಗಾವಿ, ಟಿಡಿಪಿಎಲ್-1, ಟಿಡಿಪಿಎಲ್-2, ಪಯೋನಿರ್ಯ, ಹುಲಕೋಟಿ ಕೆಎಚ್‌ಬಿ, ಕಪ್ಪತ್ತಗುಡ್ಡ ಗಾಳಿಯಂತ್ರ ಹಾಗೂ ಜಿಲ್ಲಾ ಆಸ್ಪತ್ರೆ ಮಾರ್ಗ ಸೇರಿದಂತೆ 11 ಕೆವಿ ಫೀಡರ್‌ಗಳಾದ ಎಫ್-1 ಆದರ್ಶನಗರ, ಎಫ್-3 ಮುಳಗುಂದ, ಎಫ್-5 ತ್ರಿಕೂಟೇಶ್ವರ, ಎಫ್-6 ಗ್ರೇನ್ ಮಾರ್ಕೆಟ್, ಎಫ್-7 ಇಂಡಸ್ಟ್ರಿಯಲ್, ಎಫ್-10 ಡಿಸಿ ಕಚೇರಿ, ಎಫ್-4 ಕೆಎಸ್‌ಆರ್‌ಟಿಸಿ, ಎಫ್-2 ಹರ್ತಿ ಎನ್‌ಜೆವೈ, ಎಫ್-9 ವೀರನಾರಾಯಣ, ಎಫ್-11 ಬೆಳಧಡಿ ಹಾಗೂ ಎಫ್-8 ಕಣವಿ ಎನ್‌ಜೆವೈ ವ್ಯಾಪ್ತಿಯ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಹೆಸ್ಕಾಂ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವ್ಯಸನ ಮುಕ್ತ ಭಾರತ ನಿರ್ಮಾಣಕ್ಕೆ ಯುವಜನತೆ ಕೈಜೋಡಿಸಬೇಕು

## ವ್ಯಸನದಿಂದ ದೂರವಿದ್ದರೆ ದೇಶದ ಭವಿಷ್ಯ ಭದ್ರ



**ವಿಜಯಸಾಕ್ಷಿ ಸುದ್ದಿ, ಗದಗ**

ಯುವಜನತೆ ಸ್ವಯಂ ಪ್ರೇರಣೆಯಿಂದ ದುಶ್ಚಟಗಳಿಂದ ದೂರವಿದ್ದು, ವ್ಯಸನಮುಕ್ತ ಸಮಾಜ ಹಾಗೂ ನಶಾಮುಕ್ತ ಭಾರತ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಕರೆ ನೀಡಿದರು.

ಬೆಟಗೇರಿಯ ಆದರ್ಶ ಶಿಕ್ಷಣ ಸಮಿತಿಯ ಸುವರ್ಣ ಮಹೋತ್ಸವ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಆದರ್ಶ ಶಿಕ್ಷಣ ಸಮಿತಿಯ ಶ್ರೀ ಡಿ.ಎಸ್. ಕುರ್ತಕೋಟಿ ಮೆಮೋರಿಯಲ್ ಪಿಯು ಕಾಲೇಜಿನ ಸಂಯುಕ್ತ ಆಶ್ರಯದಲ್ಲಿ ಶ್ರೀ ಮ.ನಿ.ಪ್ರ. ಡಾ. ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆಯ ಅಂಗವಾಗಿ ಆಯೋಜಿಸಿದ್ದ ಟಿವ್ಯಸನ ಮುಕ್ತ ದಿನಾಚರಣೆ2026ಟಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆಗಸ್ಟ್ 1ರಂದು ಜನಿಸಿದ ಪರಮಪೂಜ್ಯ ಮಹಾಂತ ಶಿವಯೋಗಿಗಳು 1975ರಿಂದ ಸುಮಾರು 42 ವರ್ಷಗಳ ಕಾಲ ಟಿಮಹಾಂತ ಜೋಳಿಗೆಟಿ ಅಭಿಯಾನದ ಮೂಲಕ ಮನೆ ಮನೆಗೆ ತೆರಳಿ ಸಿಗರೇಟ್, ತಂಬಾಕು, ಮದ್ಯಪಾನದಂತಹ ದುಶ್ಚಟಗಳನ್ನು ತ್ಯಜಿಸುವಂತೆ ಜನರಲ್ಲಿ ಜಾಗೃತಿ ಮೂಡಿಸಿದರು. ಅವರ ಸೇವೆಯನ್ನು ಸ್ಮರಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಪ್ರತಿವರ್ಷ ಆಗಸ್ಟ್ 1ರಂದು ವ್ಯಸನ ಮುಕ್ತ ದಿನಾಚರಣೆಯನ್ನು ಆಚರಿಸುತ್ತಿದೆ ಎಂದು ತಿಳಿಸಿದರು.

ಇಂದು ಅನೇಕ ಯುವಕರು ಮದ್ಯಪಾನ, ಧೂಮಪಾನ, ತಂಬಾಕು ಹಾಗೂ ಮಾದಕ ದ್ರವ್ಯಗಳ ವ್ಯಸನಕ್ಕೆ ಬಲಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಧೂಮಪಾನ ಶ್ವಾಸಕೋಶ, ಮದ್ಯಪಾನ ಯಕೃತ್ತು ಹಾಗೂ ಮಾದಕ ದ್ರವ್ಯಗಳು ನರಮಂಡಲವನ್ನು ಹಾನಿಗೊಳಿಸಿ ಕುಟುಂಬ ಮತ್ತು ಸಮಾಜದ ನೆಮ್ಮದಿಯನ್ನು ಹಾಳು ಮಾಡುತ್ತಿವೆ ಎಂದು ಹೇಳಿದರು.ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಮನೋವಿಜ್ಞಾನ ಸಹ ಪ್ರಾಧ್ಯಾಪಕ ಡಾ. ಫಕೀರಪ್ಪ ಗಾಣಿಗೇರ ಉಪನ್ಯಾಸ ನೀಡಿ, ಮಾದಕ ವ್ಯಸನವು ಕೇವಲ ದುಶ್ಚಟವಲ್ಲ, ಅದು ಮೆದುಳಿನಲ್ಲಿ ಉಂಟಾಗುವ ಜೈವಿಕ ಹಾಗೂ ರಾಸಾಯನಿಕ ಬದಲಾವಣೆಗಳಿಂದ ಉಂಟಾಗುವ ಕಾಯಿಲೆಯಾಗಿದೆ ಎಂದು ವಿವರಿಸಿದರು.

ದೇಶದಲ್ಲಿ ಸುಮಾರು 16 ಕೋಟಿ ಜನರು ಮದ್ಯಪಾನ ಸಂಬಂಧಿತ ಸಮಸ್ಯೆಗಳಿಂದ ಬಳಲುತ್ತಿದ್ದು, 6 ಕೋಟಿ ಜನ ತೀವ್ರ ವ್ಯಸನಕ್ಕೆ ಒಳಗಾಗಿದ್ದಾರೆ. ಗಾಂಜಾ, ಒಪಿಯಾಯ್ಡ್‌ಗಳು ಹಾಗೂ ಇತರ ಮಾದಕ ವಸ್ತುಗಳ ಬಳಕೆಯಿಂದ ಲಕ್ಷಾಂತರ ಜನರು ದೈಹಿಕ ಮತ್ತು ಮಾನಸಿಕ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ. ಇತ್ತೀಚೆಗೆ 10 ರಿಂದ 15 ವರ್ಷದ ಮಕ್ಕಳೂ ವೈಟ್ನರ್, ಪೇಂಟ್ ಥಿನ್ನರ್, ಪೆಟ್ರೋಲ್ ವಾಸನೆ ಸೇರಿದಂತೆ ಅಪಾಯಕಾರಿ ವಸ್ತುಗಳ ಮೂಲಕ ವ್ಯಸನಕ್ಕೆ ಒಳಗಾಗುತ್ತಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಹೇಳಿದರು.

ಆರಂಭಿಕ ಹಂತದಲ್ಲಿಯೇ ವ್ಯಸನದ ಲಕ್ಷಣಗಳನ್ನು ಗುರುತಿಸಿ ಸೂಕ್ತ ವೈದ್ಯಕೀಯ ಚಿಕಿತ್ಸೆ ಹಾಗೂ ಕೌನ್ಸೆಲಿಂಗ್ ನೀಡಿದರೆ ಅನೇಕ ಜೀವಗಳನ್ನು ಉಳಿಸಬಹುದು.

> ಡ್ರಗ್ಸ್‌ಗೆ ನೋ ಹೇಳಿ... ಬದುಕಿಗೆ ಯೆಸ್‌ಹೇಳಿ. ಯುವಜನತೆ ವ್ಯಸನದಿಂದ ದೂರವಿದ್ದಾಗ ಮಾತ್ರ ಆರೋಗ್ಯವಂತ ಸಮಾಜ ಮತ್ತು ಬಲಿಷ್ಠ ರಾಷ್ಟ್ರ ನಿರ್ಮಾಣ ಸಾಧ್ಯ.
>
> – **ಎಸ್.ವಿ. ಸಂಕನೂರ,** ವಿಧಾನ ಪರಿಷತ್ ಸದಸ್ಯ

ಯಾರಿಗಾದರೂ ವ್ಯಸನದ ಸಮಸ್ಯೆ ಇದ್ದರೆ ಸರ್ಕಾರಿ ಉಚಿತ ಸಹಾಯವಾಣಿ ಟಿಟೆಲಿ-ಮಾನಸಟಿ ಮೂಲಕವೂ ನೆರವು ಪಡೆಯಬಹುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಆದರ್ಶ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಎ.ಡಿ. ಗೋಡಕಿಂಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಬಿ. ಮಡ್ಲೂರ, ಬೆಟಗೇರಿ ಪೊಲೀಸ್ ಠಾಣೆಯ ಪಿಎಸ್‌ಐ ಲಕ್ಷ್ಮಣ ಅರಿ, ಪ್ರಾಧ್ಯಾಪಕ ಬಾಹುಬಲಿ ಜೈನ, ಕಾಲೇಜಿನ ಪ್ರಾಂಶುಪಾಲ ಆರ್.ಆರ್. ಕುಲಕರ್ಣಿ, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವ್ಯಸನ ಮುಕ್ತ ದಿನಾಚರಣೆಯ ಪ್ರತಿಜ್ಞಾವಿಧಿ ಬೋಧಿಸಲಾಯಿತು. ರಾಜ್ಯ ಪ್ರಶಸ್ತಿ ವಿಜೇತ ಜನಪದ ಕಲಾವಿದ ವೀರಣ್ಣ ಅಂಗಡಿ ದುಶ್ಚಟಗಳ ದುಷ್ಪರಿಣಾಮ ಕುರಿತು ಸ್ವರಚಿತ ಗೀತೆ ಪ್ರಸ್ತುತಪಡಿಸಿದರು. ವಿದ್ಯಾರ್ಥಿಗಳಿಂದ ವ್ಯಸನ ವಿರೋಧಿ ಕಿರು ನಾಟಕವೂ ಪ್ರದರ್ಶನಗೊಂಡಿತು.

### ಸೌಲಭ್ಯ ವಿತರಣೆಯಲ್ಲಿ ವಿಳಂಬ ಬೇಡ; ಡಾ. ನಾಗಲಕ್ಷ್ಮಿ ಚೌಧರಿ

## ಮಹಿಳೆಯರ ಸಮಸ್ಯೆಗೆ ತ್ವರಿತ ಸ್ಪಂದನೆಗೆ ಸೂಚನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಮಹಿಳೆಯರ ಸಮಸ್ಯೆಗಳಿಗೆ ಅಧಿಕಾರಿಗಳು ಮಾನವೀಯ ದೃಷ್ಟಿಕೋನದಿಂದ ಸ್ಪಂದಿಸಿ, ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಫಲಾನುಭವಿಗಳಿಗೆ ತ್ವರಿತವಾಗಿ ತಲುಪಿಸುವಲ್ಲಿ ಹೆಚ್ಚಿನ ಆಸಕ್ತಿಯಿಂದ ಕಾರ್ಯನಿರ್ವಹಿಸಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಸೂಚಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಶನಿವಾರ ನಡೆದ ಮಹಿಳಾ ಸ್ಪಂದನಾ ಸಭೆ ಹಾಗೂ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿವಿಧ ಇಲಾಖೆಗಳ ವಸತಿ ನಿಲಯಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಕಲ್ಪಿಸಬೇಕು ಎಂದು ಹೇಳಿದರು.

ವಿಧವಾ ವೇತನ, ವೃದ್ಧಾಪ್ಯ ವೇತನ ಸೇರಿದಂತೆ ಸಾಮಾಜಿಕ ಭದ್ರತಾ ಯೋಜನೆಗಳ ಸೌಲಭ್ಯಗಳನ್ನು ಫಲಾನುಭವಿಗಳಿಗೆ ಯಾವುದೇ ವಿಳಂಬವಿಲ್ಲದೆ ತಲುಪಿಸಬೇಕು. ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಸುರಕ್ಷಿತ ವಾತಾವರಣ ಒದಗಿಸುವುದು ಇಲಾಖೆಯ ಜವಾಬ್ದಾರಿಯಾಗಿದ್ದು, ವಿದ್ಯಾರ್ಥಿಗಳ ಚಲನವಲನದ ಬಗ್ಗೆ ವಾರ್ಡನ್‌ಗಳು ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಆಧಾರ್ ನವೀಕರಣ, ಪಡಿತರ ಚೀಟಿ, ಬಡ ಮಹಿಳೆಯರಿಗೆ ಮನೆ, ವಿಧವಾ ವೇತನ, ವೃದ್ಧಾಪ್ಯ ವೇತನ ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಸಾರ್ವಜನಿಕರಿಂದ ಅರ್ಜಿಗಳನ್ನು ಸ್ವೀಕರಿಸಿದ ಡಾ. ನಾಗಲಕ್ಷ್ಮಿ ಚೌಧರಿ, ಅವುಗಳ ಶೀಘ್ರ ವಿಲೇವಾರಿಗೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿ, ಸಂಬಂಧಿಸಿದ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡಿದರು.

> ಮಹಿಳೆಯರ ಸಮಸ್ಯೆಗಳಿಗೆ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸಬೇಕು. ಸರ್ಕಾರದ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ವಿಳಂಬವಿಲ್ಲದೆ ತಲುಪಬೇಕು.
>
> – **ಡಾ. ನಾಗಲಕ್ಷ್ಮಿ ಚೌಧರಿ,** ಅಧ್ಯಕ್ಷೆ, ಕರ್ನಾಟಕ ರಾಜ್ಯ ಮಹಿಳಾ ಆಯೋಗ

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಡಾ. ಸುರೇಶ ನಾಡಗೌಡ್ರ, ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಕಾರ್ಯದರ್ಶಿ ರೂಪಾ, ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ರಾಧಾ ಮಣ್ಣೂರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಎನ್. ತುಂಬರಮಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಶರಣ ಸಾಹಿತ್ಯ ಕಣ್ಣಿಲ್ಲದವರಿಗೆ ಕಣ್ಣು, ಬದುಕಿಗೆ ದಾರಿ ತೋರಿಸುವ ದಿವ್ಯಶಕ್ತಿ: ಶಿವಕುಮಾರಗೌಡ ಪಾಟೀಲ

## ವಚನದ ಬೆಳಕಿನಲ್ಲಿ ಬೆಳೆಯಲಿ ಮಕ್ಕಳ ಭವಿಷ್ಯ



**ವಿಜಯಸಾಕ್ಷಿ ಸುದ್ದಿ, ಗದಗ**

ಶರಣ ಸಾಹಿತ್ಯ ಮತ್ತು ವಚನ ಸಾಹಿತ್ಯವು ಮನುಷ್ಯನಿಗೆ ಅರಿವು, ವಿದ್ಯೆ ಹಾಗೂ ಸಂಸ್ಕಾರ ನೀಡಿ ಸನ್ಮಾರ್ಗದಲ್ಲಿ ಬದುಕುವ ಶಕ್ತಿಯನ್ನು ನೀಡುತ್ತದೆ ಎಂದು ಧಾರವಾಡ ಕೆಸಿಸಿ ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ ಹೇಳಿದರು.

ಗದಗ ತಾಲೂಕಿನ ಹೊಸಳ್ಳಿ ಗ್ರಾಮದ ಬೂದೀಶ್ವರ ಸಂಸ್ಥಾನ ಮಠದಲ್ಲಿ ಶನಿವಾರ ನಡೆದ ಗದಗ ಜಿಲ್ಲಾ ದ್ವಿತೀಯ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದಲ್ಲಿ ಗ್ರಂಥಗಳನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ಕೋಶ ಓದಬೇಕು, ದೇಶ ಸುತ್ತಬೇಕು ಎಂಬ ಗಾದೆಯಂತೆ ಜಗತ್ತು ಮತ್ತು ಬದುಕಿನ ಅರಿವಿಗೆ ಸಾಹಿತ್ಯದ ಅಧ್ಯಯನ ಅಗತ್ಯ. ಶರಣ ಸಾಹಿತ್ಯವು ಕಣ್ಣಿಲ್ಲದವರಿಗೆ ಕಣ್ಣು, ವಿದ್ಯೆಯಿಲ್ಲದವರಿಗೆ ಅರಿವು ಹಾಗೂ ಬದುಕಿಗೆ ಸ್ಪಷ್ಟ ದಾರಿ ತೋರಿಸುವ ದಿವ್ಯಶಕ್ತಿಯಾಗಿದೆ. ಜಾತಿ-ಮತಗಳ ಭೇದ ಮರೆತು ಮನುಷ್ಯ ಜಾತಿ ಒಂದೇ ಎಂಬ ಮೌಲ್ಯವನ್ನು ಮಕ್ಕಳಲ್ಲಿ ಬಿತ್ತಲು ಶರಣ ಸಾಹಿತ್ಯದ ಬೋಧನೆ ಅತ್ಯಗತ್ಯ ಎಂದರು. ಸಮ್ಮೇಳನದ ಸರ್ವಾಧ್ಯಕ್ಷ ಡಾ. ನಿಂಗು ಸೊಲಗಿ ಮಾತನಾಡಿ, ಬಸವಣ್ಣನವರ ವಚನಗಳು ಹಾಗೂ ಶರಣರ ತತ್ವಗಳು ಸಮಾಜಕ್ಕೆ ಸದಾ ದಾರಿದೀಪವಾಗಿವೆ. ವಚನಗಳ ಆದರ್ಶ ಹಾಗೂ ಶರಣ ಸಂಸ್ಕೃತಿಯನ್ನು ಬಾಲ್ಯದಲ್ಲಿಯೇ ಮಕ್ಕಳಿಗೆ ಪರಿಚಯಿಸಬೇಕು. ಶರಣ ಸಂಸ್ಕೃತಿ ಯಾವುದೇ ಒಂದು ವರ್ಗಕ್ಕೆ ಸೀಮಿತವಲ್ಲ; ಅದು ಸಮಸ್ತ ಮಾನವಕುಲದ ಸಾರ್ವಭೌಮ ಸಂಸ್ಕೃತಿಯಾಗಿದೆ ಎಂದು ಹೇಳಿದರು. ಇವ ನಮ್ಮವ ಎಂಬ ಸಮಾನತೆಯ ಭಾವನೆಯನ್ನು ಮಕ್ಕಳಲ್ಲಿ ಬಿತ್ತಿದಾಗ ಮಾತ್ರ ಆದರ್ಶ ಸಮಾಜ ನಿರ್ಮಾಣ ಸಾಧ್ಯ. ಮೇವುಂಡಿ ಮಲ್ಲಾರಿ ಅವರ ಕಥೆಗಳನ್ನು ಉದಾಹರಿಸಿ, ಮಕ್ಕಳಲ್ಲಿ ನೈಸರ್ಗಿಕ ಕುತೂಹಲ, ಸೃಜನಶೀಲತೆ ಹಾಗೂ ವೈಜ್ಞಾನಿಕ ಮನೋಭಾವ ಬೆಳೆಸಬೇಕಿದೆ ಎಂದರು. ಇಂದಿನ ಮಕ್ಕಳು ಪ್ರಕೃತಿಯಿಂದ ದೂರವಾಗುತ್ತಿದ್ದಾರೆ. ಅವರಿಗೆ ಜಾನಪದ ಆಟಗಳು, ಕಥೆಗಳು, ಕಾಯಕ ಹಾಗೂ ದಾಸೋಹ ಸಂಸ್ಕೃತಿಯನ್ನು ಶಿಕ್ಷಣದ ಭಾಗವಾಗಿ ಪರಿಚಯಿಸಬೇಕು. ಕೇವಲ ಪರೀಕ್ಷೆಗಾಗಿ ಓದುವ ಶಿಕ್ಷಣವಲ್ಲ, ಜೀವನದ ಸವಾಲುಗಳನ್ನು ಎದುರಿಸುವ ಜೀವನ ಕೌಶಲಗಳನ್ನು ಕಲಿಸುವುದು ಪೋಷಕರು ಮತ್ತು ಶಿಕ್ಷಕರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಅಪ್ಪಣ್ಣ ಇನಾಮತಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳ ಮನಸ್ಸು ಬಿಳಿ ಹಾಳೆಯಂತೆ. ಅವರಲ್ಲಿ ನಾವು ಬಿತ್ತುವ ಮೌಲ್ಯಗಳೇ ಅವರ ಭವಿಷ್ಯ ರೂಪಿಸುತ್ತವೆ. ಪೋಷಕರು ತಮ್ಮ ನಿರೀಕ್ಷೆಗಳ ಒತ್ತಡ ಹೇರದೆ, ಮಕ್ಕಳ ಆಸಕ್ತಿ ಮತ್ತು ಪ್ರತಿಭೆಗೆ ಪ್ರೋತ್ಸಾಹ ನೀಡಬೇಕು ಎಂದರು. ಸಾನಿಧ್ಯ ವಹಿಸಿದ್ದ ಅಭಿನವ ಬೂದೀಶ್ವರ ಮಹಾಸ್ವಾಮೀಜಿ ಮಾತನಾಡಿ, ಇಂದಿನ ಬದಲಾಗುತ್ತಿರುವ ಕಾಲಘಟ್ಟದಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರ, ಸಂಸ್ಕೃತಿ ಹಾಗೂ ಸಮಯದ ಮೌಲ್ಯವನ್ನು ತಿಳಿಸುವ ಅಗತ್ಯವಿದೆ. ಬಾಲ್ಯ ಮತ್ತು ವಿದ್ಯಾಭ್ಯಾಸದ ಅವಧಿಯನ್ನು ಸದುಪಯೋಗಪಡಿಸಿಕೊಂಡರೆ ಜೀವನ ಸಾರ್ಥಕವಾಗುತ್ತದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಡಾ. ಶಿವಪ್ಪ ಕುರಿ, ಸುಧಾ ಹುಚ್ಚಣ್ಣವರ, ಶಿವಪ್ರಕಾಶ ಮಹಾಜನಶೆಟ್ಟರ, ಸುಲೋಚನಾ ಐಹೊಳೆ, ಡಿ.ಎಸ್. ತಳವಾರ, ಎಂ.ಕೆ. ಲಮಾಣಿ, ನಂದಾ ಕಪ್ಪತ್ತಣವರ, ಬೂದಪ್ಪ ಅಂಗಡಿ, ಬಸವರಾಜ ಕೊಟಗಿ, ಪ್ರಕಾಶ ಅಸುಂಡಿ ಉಪಸ್ಥಿತರಿದ್ದರು.

## ರಾಷ್ಟ್ರಪ್ರಶಸ್ತಿ ಪುರಸ್ಕೃತ ಸಾಹಿತಿ ಡಾ. ನಿಂಗು ಸೊಲಗಿ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ

# ಮಕ್ಕಳ ಮನ ಗೆಲ್ಲುವಲ್ಲಿ ಸೋಲಿಲ್ಲದ ನಿಂಗು ಸೊಲಗಿ..!


ಶಿಕ್ಷಕರು ಸಾವಿರಾರು ಜನರಿರಬಹುದು. ಸಾಹಿತಿಗಳೂ ಅನೇಕರಿರಬಹುದು. ಆದರೆ ಮಕ್ಕಳ ಮನಸ್ಸನ್ನು ಅರ್ಥಮಾಡಿಕೊಂಡು, ಅವರ ಕನಸುಗಳಿಗೆ ಬಣ್ಣ ತುಂಬಿ, ಬದುಕಿಗೆ ದಿಕ್ಕು ತೋರಿಸುವ ಶಿಕ್ಷಕರು ಮಾತ್ರ ಅಪರೂಪ. ಅಂತಹ ಅಪರೂಪದ ವ್ಯಕ್ತಿತ್ವವೇ ರಾಷ್ಟ್ರಪ್ರಶಸ್ತಿ ಪುರಸ್ಕೃತ ಶಿಕ್ಷಕ, ಮಕ್ಕಳ ಅಚ್ಚುಮೆಚ್ಚಿನ ಸಾಹಿತಿ, ನಾಟಕಕಾರ ಹಾಗೂ ಶಿಕ್ಷಣ ಚಿಂತಕ ಡಾ. ನಿಂಗು ಸೊಲಗಿ.

ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಹಾಗೂ ಶ್ರೀ ಜಗದ್ಗುರು ಬೂದೀಶ್ವರ ವಿದ್ಯಾಪೀಠದ ಸಂಯುಕ್ತ ಆಶ್ರಯದಲ್ಲಿ ನಡೆಯಲಿರುವ ಗದಗ ಜಿಲ್ಲಾ ದ್ವಿತೀಯ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಡಾ. ನಿಂಗು ಸೊಲಗಿ ಆಯ್ಕೆಯಾಗಿರುವುದು ಕೇವಲ ಅವರಿಗಷ್ಟೇ ಸಂದ ಗೌರವವಲ್ಲ; ಮಕ್ಕಳ ಸಾಹಿತ್ಯ, ಶಿಕ್ಷಣ ಮತ್ತು ಸೃಜನಶೀಲತೆಗೆ ಸಂದ ಗೌರವವಾಗಿದೆ.

ರೋಣ ತಾಲೂಕಿನ ಕೌಜಗೇರಿ ಎಂಬ ಪುಟ್ಟ ಗ್ರಾಮದಲ್ಲಿ 1968ರ ಜುಲೈ 10ರಂದು ಬಡ ಕುಟುಂಬದಲ್ಲಿ ಜನಿಸಿದ ನಿಂಗು ಸೊಲಗಿ ಅವರ ಬಾಲ್ಯ ಸುಖಮಯವಾಗಿರಲಿಲ್ಲ.

ಬಡತನ, ಸಂಕಷ್ಟ, ಅಭಾವಗಳ ನಡುವೆಯೇ ಶಿಕ್ಷಣದ ಕನಸನ್ನು ಕೈಬಿಡದೆ, ಪರಿಶ್ರಮವನ್ನೇ ಬಂಡವಾಳವನ್ನಾಗಿ ಮಾಡಿಕೊಂಡು ಮುಂದೆ ಸಾಗಿದವರು. ಕರ್ನಾಟಕ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದು 1990ರಲ್ಲಿ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಾಗಿ ಸೇವೆ ಆರಂಭಿಸಿದರು. ಇಂದು ಮೂರು ದಶಕಗಳಿಗೂ ಹೆಚ್ಚು ಕಾಲ ಶಿಕ್ಷಣ ಕ್ಷೇತ್ರದಲ್ಲಿ ಸಾವಿರಾರು ಮಕ್ಕಳ ಬದುಕಿಗೆ ಬೆಳಕಾಗಿದ್ದಾರೆ. ಶಿಕ್ಷಕರಾಗಿ ಪಾಠ ಹೇಳುವುದರಲ್ಲೇ ಸೀಮಿತವಾಗದೆ, ಮಕ್ಕಳ ಕಲ್ಪನಾ ಲೋಕವನ್ನು ವಿಸ್ತರಿಸುವ ಸಾಹಿತ್ಯವನ್ನು ರಚಿಸಿದ್ದಾರೆ. 'ಬನದಮ್ಮ', 'ಕಾಗೆ ಬಳಗ', 'ಕರುಳಿನ ಗೆಳೆಯ', 'ಬಾಳ ಜ್ಯೋತಿ', 'ಕನಸಿನ ಬಾಲೆ', 'ವಿದೇಶಕ್ಕೆ ಹಾರಿದ ಹಕ್ಕಿ' ಸೇರಿದಂತೆ ಹಲವು ಮಕ್ಕಳ ನಾಟಕಗಳು ರಾಜ್ಯದ ವಿವಿಧ ವೇದಿಕೆಗಳಲ್ಲಿ ಪ್ರದರ್ಶನಗೊಂಡಿವೆ.

ಅವರ ಐತಿಹಾಸಿಕ ನಾಟಕ 'ಬಂಡೆದ್ದ ಮುಂಡರಗಿ ಭೀಮರಾಯ' ಬಾನುಲಿಯಲ್ಲಿ ಪ್ರಸಾರಗೊಂಡು ಜನಮನ್ನಣೆ ಪಡೆದಿರುವುದಷ್ಟೇ ಅಲ್ಲ,




ಶಾಲಾ ಪಠ್ಯದಲ್ಲೂ ಸ್ಥಾನ ಪಡೆದಿರುವುದು ಅವರ ಸಾಹಿತ್ಯದ ಶಕ್ತಿಗೆ ಸಾಕ್ಷಿಯಾಗಿದೆ.

ಕವನ, ನಾಟಕ, ಸಂಶೋಧನೆ, ಮಕ್ಕಳ ಸಾಹಿತ್ಯ, ಜನಪದ, ಸಂಗೀತ, ಬೀದಿ ನಾಟಕ, ಪರಿಸರ ಜಾಗೃತಿ, ಬಾಲ್ಯ ವಿವಾಹ ತಡೆ, ಸಾಕ್ಷರತೆ, ವಿಶೇಷ ಮಕ್ಕಳ ಶಿಕ್ಷಣಹೀಗೆ ಸ್ಪರ್ಶಿಸದ ಕ್ಷೇತ್ರವೇ ಇಲ್ಲ ಎನ್ನುವಷ್ಟು ವ್ಯಾಪಕವಾಗಿ ಅವರು ಕೆಲಸ ಮಾಡಿದ್ದಾರೆ. ಮಕ್ಕಳಿಗಾಗಿ ಬರೆದ ಹಾಡುಗಳಿಗೆ ತಾವೇ ರಾಗ ಸಂಯೋಜಿಸಿ ಧ್ವನಿಮುದ್ರಿಕೆ ಬಿಡುಗಡೆ ಮಾಡಿರುವುದು ಅವರ ಬಹುಮುಖ ಪ್ರತಿಭೆಯ ಮತ್ತೊಂದು ಮುಖ. ಶಾಲೆಯ ನಾಲ್ಕು ಗೋಡೆಗಳೊಳಗೆ ಶಿಕ್ಷಣವನ್ನು ಸೀಮಿತಗೊಳಿಸದೆ, ಮಕ್ಕಳಲ್ಲಿ ಆತ್ಮವಿಶ್ವಾಸ, ನಾಯಕತ್ವ, ಸೃಜನಶೀಲತೆ ಮತ್ತು ಜೀವನ ಕೌಶಲ್ಯ ಬೆಳೆಸುವ ಕೆಲಸವನ್ನು ಅವರು ನಿರಂತರವಾಗಿ ಮಾಡುತ್ತಲೇ ಬಂದಿದ್ದಾರೆ. ಶಿಕ್ಷಣ ಇಲಾಖೆಯ ಅನೇಕ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಸಾಹಿತ್ಯ ರಚಿಸಿ, ರಾಜ್ಯಮಟ್ಟದ ಸಂಪನ್ಮೂಲ ವ್ಯಕ್ತಿಯಾಗಿ ಸೇವೆ ಸಲ್ಲಿಸಿದ್ದಾರೆ.

ಅವರ ಸಾಧನೆಗೆ ಕರ್ನಾಟಕ ಸರ್ಕಾರದ ರಾಷ್ಟ್ರಪ್ರಶಸ್ತಿ, ವಿಶೇಷ ಶಿಕ್ಷಕ ರಾಜ್ಯ ಪ್ರಶಸ್ತಿ, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಗೌರವ ಪ್ರಶಸ್ತಿ, ಉತ್ತಮ ಶಿಕ್ಷಕ ಸಾಹಿತಿ ಪ್ರಶಸ್ತಿ ಸೇರಿದಂತೆ ಹಲವಾರು ಪ್ರತಿಷ್ಠಿತ ಪ್ರಶಸ್ತಿಗಳು ಲಭಿಸಿವೆ. ಮಕ್ಕಳ ರಂಗಭೂಮಿ ಕುರಿತ ಸಂಶೋಧನೆಗಾಗಿ ಹಂಪಿ ಕನ್ನಡ ವಿಶ್ವವಿದ್ಯಾಲಯವು ಪಿಎಚ್.ಡಿ. ಪದವಿ ನೀಡಿ ಗೌರವಿಸಿದೆ. ಈ ಬಾರಿ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದಲ್ಲಿ ಅವರ ಹೊಸ ಕೃತಿ 'ನಂಗೂ ಬೇಕು ನಿಂಗೂ ಸಾಂಗು' ಲೋಕಾರ್ಪಣೆಗೊಳ್ಳುತ್ತಿದೆ.

ಕೇವಲ 21 ಪದ್ಯಗಳನ್ನು ಒಳಗೊಂಡ ಈ ಕೃತಿ, ಮಕ್ಕಳ ಚಿಂತನೆ, ಸಂಸ್ಕಾರ, ಕನ್ನಡ, ಪರಿಸರ, ವಿಜ್ಞಾನ, ಯೋಗ, ದೇಶಪ್ರೇಮ ಮತ್ತು ಜೀವನ ಮೌಲ್ಯಗಳನ್ನು ಸರಳ ಹಾಗೂ ಪರಿಣಾಮಕಾರಿ ಭಾಷೆಯಲ್ಲಿ ಪರಿಚಯಿಸುತ್ತದೆ. ಮಕ್ಕಳ ಮನಸ್ಸನ್ನು ಅರಿತು ಬರೆಯಬಲ್ಲ ಲೇಖಕರಿಂದ ಮಾತ್ರ ಇಂತಹ ಕೃತಿ ಸಾಧ್ಯ. ಈ ಸಮ್ಮೇಳನದ ಮತ್ತೊಂದು ವಿಶೇಷವೆಂದರೆ, ಇದು ಮಕ್ಕಳಿಂದ... ಮಕ್ಕಳಿಗಾಗಿ... ಮಕ್ಕಳಿಗೋಸ್ಕರ... ನಡೆಯುತ್ತಿರುವ ಅಪರೂಪದ ಸಾಹಿತ್ಯ ಸಮ್ಮೇಳನ. ಮಕ್ಕಳ ವಿಜ್ಞಾನ ಪ್ರದರ್ಶನ, ಚಿಂತನಾತ್ಮಕ ಹರಟೆ, ಶರಣ ಸಾಹಿತ್ಯ ಗೋಷ್ಠಿಗಳು, ಬಾಲ ಶರಣ ಸಿರಿ ಪ್ರಶಸ್ತಿ ಪ್ರದಾನ ಸೇರಿದಂತೆ ಹಲವು ವಿಶೇಷ ಕಾರ್ಯಕ್ರಮಗಳು ಸಮ್ಮೇಳನದ ಮೆರುಗನ್ನು ಹೆಚ್ಚಿಸಲಿವೆ. ಡಾ. ನಿಂಗು ಸೊಲಗಿ ಅವರಂತಹ ಸೃಜನಶೀಲ ಶಿಕ್ಷಕರು ಸಮಾಜಕ್ಕೆ ಸಿಗುವುದು ಅಪರೂಪ. ಅವರ ಬದುಕು ಪ್ರತಿಯೊಬ್ಬ ಶಿಕ್ಷಕನಿಗೂ, ಪ್ರತಿಯೊಬ್ಬ ವಿದ್ಯಾರ್ಥಿಗೂ, ಪ್ರತಿಯೊಬ್ಬ ಸಾಹಿತಿಗೂ ಪ್ರೇರಣೆ. ಮಕ್ಕಳಲ್ಲಿ ಕನಸು ಬಿತ್ತುವ ಈ ಮಹಾನ್ ಶಿಕ್ಷಣ ಸಾಧಕನಿಗೆ ಸರ್ವಾಧ್ಯಕ್ಷ ಸ್ಥಾನ ದೊರೆತಿರುವುದು ನಿಜಕ್ಕೂ ಸಮ್ಮೇಳನದ ಗೌರವವನ್ನು ಮತ್ತಷ್ಟು ಹೆಚ್ಚಿಸಿದೆ. ಡಾ. ನಿಂಗು ಸೊಲಗಿ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು. ಅವರ ಸಾಹಿತ್ಯ ಮತ್ತು ಶಿಕ್ಷಣ ಸೇವೆ ಇನ್ನಷ್ಟು ಎತ್ತರಕ್ಕೆ ಬೆಳೆಯಲಿ ಎಂಬುದು ಸಮಸ್ತ ಶರಣ ಬಂಧುಗಳ ಆಶಯ.



**-ಶ್ರೀಮತಿ ಸುಧಾ ಹುಚ್ಚಣ್ಣವರ,**
ಜಿಲ್ಲಾಧ್ಯಕ್ಷರು, ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆ

---

## ಶ್ರೀಮತಿ ಸುರಯ್ಯಾ ಬೇಗಂ ಎಲ್. ಹಾದಿಮನಿಯವರ ಕವನ ಸಂಕಲನದ ಸಾಹಿತ್ಯಾವಲೋಕನ

# ಸಾಮರಸ್ಯದ ಅಕ್ಷರ ದೀವಿಗೆಯಂತಿದೆ ಮನದಂಗಳದಿ...

ಕನ್ನಡ ಸಾಹಿತ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜವಾಬ್ದಾರಿ, ಮಾನವೀಯ ಮೌಲ್ಯಗಳು ಹಾಗೂ ಸ್ತ್ರೀಸಂವೇದನೆಯನ್ನು ಸಮಾನವಾಗಿ ಹೊತ್ತ ಕೃತಿಗಳು ವಿರಳ. ಆ ನಿಟ್ಟಿನಲ್ಲಿ ಶ್ರೀಮತಿ ಸುರಯ್ಯಾ ಬೇಗಂ ಎಲ್. ಹಾದಿಮನಿಯವರ ಚೊಚ್ಚಲ ಕವನ ಸಂಕಲನ ಮನದಂಗಳದಿ...' ಗಮನಾರ್ಹ ಕೃತಿಯಾಗಿ ಹೊರಹೊಮ್ಮಿದೆ.

ಇದು ಕೇವಲ ಕವಿತೆಗಳ ಸಂಕಲನವಲ್ಲ, ಧಾರ್ಮಿಕ ಸಾಮರಸ್ಯ, ಮಾನವೀಯತೆ, ಸ್ತ್ರೀ ಮನಸ್ಸಿನ ತಲ್ಲಣ, ಸಾಮಾಜಿಕ ವೈರುಧ್ಯಗಳು ಹಾಗೂ ಬದುಕಿನ ತಾತ್ವಿಕ ಚಿಂತನೆಗಳನ್ನು ಒಳಗೊಂಡಿರುವ ವೈಚಾರಿಕ ಕಾವ್ಯಯಾನವಾಗಿದೆ.


ಆದರ್ಶ ಶಿಕ್ಷಕರಾದ ಎಲ್.ಎಸ್. ಹಾದಿಮನಿಯವರ ಪುತ್ರಿಯಾಗಿರುವ ಸುರಯ್ಯಾ ಬೇಗಂ ಅವರು ಶಿಕ್ಷಣ, ಆಡಳಿತ ಮತ್ತು ಸಮಾಜಸೇವೆಯಲ್ಲೂ ಗುರುತಿಸಿಕೊಂಡಿದ್ದಾರೆ.

ಸರ್ಕಾರಿ ಅಧಿಕಾರಿಯಾಗಿ ಜವಾಬ್ದಾರಿಯುತ ಸೇವೆ ಸಲ್ಲಿಸುತ್ತಿರುವ ಅವರು, ಸಾಹಿತ್ಯದ ಮೂಲಕವೂ ತಮ್ಮ ಸಾಮಾಜಿಕ ಕಾಳಜಿಯನ್ನು ಅಭಿವ್ಯಕ್ತಗೊಳಿಸಿದ್ದಾರೆ.

ಸಂಕಲನದ ಶೀರ್ಷಿಕೆ ಕವಿತೆಯಾದ ಮನದಂಗಳದಿ...' ಇಡೀ ಕೃತಿಯ ಆಶಯವನ್ನು ಪ್ರತಿಬಿಂಬಿಸುತ್ತದೆ.

ಬಾಲ್ಯದ ಧರ್ಮಾತೀತ ಬಾಂಧವ್ಯ, ನೆರೆಹೊರೆಯ ಆತ್ಮೀಯತೆ ಹಾಗೂ ಜಾತಿ-ಧರ್ಮಗಳಾಚೆಯ ಮಾನವೀಯ ಸಂಬಂಧಗಳನ್ನು ನೆನಪಿಸಿಕೊಳ್ಳುವ ಕವಯಿತ್ರಿ, ಇಂದಿನ ಸಮಾಜದಲ್ಲಿ ಹೆಚ್ಚುತ್ತಿರುವ ದ್ವೇಷದ ರಾಜಕಾರಣದ ನಡುವೆ ಸಾಮರಸ್ಯದ ಭಾರತವನ್ನು ಮರುನಿರ್ಮಿಸಬೇಕೆಂಬ ಆಶಯ ವ್ಯಕ್ತಪಡಿಸುತ್ತಾರೆ.

ಧಾರ್ಮಿಕ ನಂಬಿಕೆಯನ್ನು ಗೌರವಿಸುವ ಕವಯಿತ್ರಿ, ಅದರ ಹೆಸರಿನಲ್ಲಿ ನಡೆಯುವ ಡಾಂಭಿಕತೆಯನ್ನು ಮಾತ್ರ ಪ್ರಶ್ನಿಸುತ್ತಾರೆ. ಕಣ್ಣು ಮುಚ್ಚಿದ ವಿರಾಗಿ', ದೇವ ನೀ ಅವತಾರ ತಾಳಲಿಲ್ಲ', ತೋರಿಕೆ' ಮುಂತಾದ ಕವಿತೆಗಳಲ್ಲಿ ಆಚರಣೆಗಿಂತ ಮಾನವೀಯತೆಯೇ ಶ್ರೇಷ್ಠ




ಎಂಬ ಸಂದೇಶವನ್ನು ನೀಡುತ್ತಾರೆ. ನಿಜವಾದ ಧರ್ಮವು ಕರುಣೆ, ದಾನ ಮತ್ತು ಆತ್ಮಶುದ್ಧಿಯಲ್ಲಿದೆ ಎಂಬುದನ್ನು ಪರಿಣಾಮಕಾರಿಯಾಗಿ ಪ್ರತಿಪಾದಿಸುತ್ತಾರೆ.

ಸ್ತ್ರೀ ಸಂವೇದನೆ ಸಂಕಲನದ ಮತ್ತೊಂದು ಪ್ರಮುಖ ಆಯಾಮ. ಸ್ವಗತ...' ಕವಿತೆಯಲ್ಲಿ ಯಶೋಧರೆಯ ಅಂತರಂಗವನ್ನು ಚಿತ್ರಿಸುವ ಮೂಲಕ ಮಹಿಳೆಯ ತ್ಯಾಗ ಮತ್ತು ಸಮಾಜದ ದ್ವಂದ್ವ ನೀತಿಯನ್ನು ಪ್ರಶ್ನಿಸುತ್ತಾರೆ. ಆತ್ಮಾವಲೋಕನ', ಕನಸು' ಹಾಗೂ ಗೆಳೆಯನಿಗೆ...' ಕವಿತೆಗಳು ದಾಂಪತ್ಯ, ಪ್ರೀತಿ ಮತ್ತು ಬದುಕಿನ ಸೂಕ್ಷ್ಮ ಸಂಬಂಧಗಳನ್ನು ಮನಮುಟ್ಟುವಂತೆ ಕಟ್ಟಿಕೊಡುತ್ತವೆ.

ಅಪ್ಪ', ಅವ್ವ', ಭಿಕ್ಷುಕ', ಓ ನನ್ನ ಬಾಂಧವರೇ' ಮುಂತಾದ ಕವಿತೆಗಳಲ್ಲಿ ಕುಟುಂಬ ಮೌಲ್ಯಗಳು, ರಾಜಕೀಯ ವಿಡಂಬನೆ ಹಾಗೂ ಮಾನವೀಯ ಕಳಕಳಿ ಜೀವಂತವಾಗಿ ಮೂಡಿಬಂದಿವೆ. ಬದುಕು ಕ್ಷಣಿಕ', ಸಂದೇಶ', ಹುಚ್ಚು' ಕವಿತೆಗಳು ಬದುಕಿನ ನಶ್ವರತೆ, ಅಹಂಕಾರದ ವ್ಯರ್ಥತೆ ಹಾಗೂ ಮನುಷ್ಯನ ಆತ್ಮಾವಲೋಕನದ ಅಗತ್ಯವನ್ನು ನೆನಪಿಸುತ್ತವೆ.

ಸುರಯ್ಯಾ ಬೇಗಂ ಅವರ ಭಾಷೆಯ ಪ್ರಮುಖ ಶಕ್ತಿ ಅದರ ಸರಳತೆ. ಉತ್ತರ ಕರ್ನಾಟಕದ ಆಡುಭಾಷೆಯ ಸೊಗಡು, ಸಂಭಾಷಣಾತ್ಮಕ ನಿರೂಪಣೆ ಹಾಗೂ ನೇರ ಅಭಿವ್ಯಕ್ತಿ ಕವಿತೆಗಳನ್ನು ಓದುಗರಿಗೆ ಇನ್ನಷ್ಟು ಆತ್ಮೀಯವಾಗಿಸುತ್ತವೆ. ಕ್ಲಿಷ್ಟ ರೂಪಕಗಳಿಗಿಂತ ಸರಳ ಪದಗಳ ಮೂಲಕವೇ ಅವರು ಗಾಢವಾದ ಭಾವನೆಗಳನ್ನು ವ್ಯಕ್ತಪಡಿಸುತ್ತಾರೆ.

ಕೆಲವೊಂದು ಕವಿತೆಗಳಲ್ಲಿ ವಿಚಾರಗಳು ನೇರ ಹೇಳಿಕೆಗಳಂತೆಯೇ ಕಾಣಿಸಿಕೊಂಡರೂ, ಅದು ಅವರ ಸಾಮಾಜಿಕ ಬದ್ಧತೆಯ ಅಭಿವ್ಯಕ್ತಿಯಾಗಿ ಓದುಗರನ್ನು ತಲುಪುತ್ತದೆ.

ಕೃತಿಗೆ ಡಾ. ಮೀನಾಕ್ಷಿ ಬಾಳಿ ಬರೆದ ಮುನ್ನುಡಿ ಹಾಗೂ ಶ್ರೀಮತಿ ಕೆ. ನೀಲಾ ಅವರ ಬೆನ್ನುಡಿ ಕವನ ಸಂಕಲನದ ಸಾಹಿತ್ಯಿಕ ಮೌಲ್ಯವನ್ನು ಮತ್ತಷ್ಟು ಎತ್ತಿ ಹಿಡಿದಿವೆ. ಕವಯಿತ್ರಿಯ ಮಾನವೀಯ ದೃಷ್ಟಿಕೋನ ಮತ್ತು ತಾಯ್ತನದ ಸಂವೇದನೆ ಅವರ ಕಾವ್ಯದ ಜೀವಾಳವಾಗಿದೆ ಎಂಬ ಅಭಿಪ್ರಾಯಗಳು ಈ ಸಂಕಲನದ ಮಹತ್ವವನ್ನು ದೃಢಪಡಿಸುತ್ತವೆ.

ಒಟ್ಟಾರೆಯಾಗಿ ಮನದಂಗಳದಿ...' ಕವನ ಸಂಕಲನವು ಕೇವಲ ಭಾವನೆಗಳ ಅಭಿವ್ಯಕ್ತಿಯಲ್ಲ; ಅದು ಸಾಮಾಜಿಕ ಜವಾಬ್ದಾರಿ, ಧಾರ್ಮಿಕ ಸಹಿಷ್ಣುತೆ, ಸ್ತ್ರೀ ಗೌರವ ಮತ್ತು ಮಾನವೀಯ ಪ್ರೀತಿಯ ಘೋಷಣೆಯಾಗಿದೆ. ಇಂದಿನ ಸಮಾಜಕ್ಕೆ ಅತ್ಯಂತ ಅಗತ್ಯವಾದ ಸಾಮರಸ್ಯದ ಸಂದೇಶವನ್ನು ಕಾವ್ಯದ ಮೂಲಕ ಪರಿಣಾಮಕಾರಿಯಾಗಿ ತಲುಪಿಸುವಲ್ಲಿ ಈ ಕೃತಿ ಯಶಸ್ವಿಯಾಗಿದೆ.

ಕನ್ನಡ ಸಾಹಿತ್ಯದಲ್ಲಿ ಅರ್ಥಪೂರ್ಣ ಕಾವ್ಯವನ್ನು ಆಸ್ವಾದಿಸಲು ಬಯಸುವ ಪ್ರತಿಯೊಬ್ಬ ಓದುಗರೂ ಓದಲೇಬೇಕಾದ ಸಂಕಲನ ಇದಾಗಿದೆ. ಶ್ರೀಮತಿ ಸುರಯ್ಯಾ ಬೇಗಂ ಎಲ್. ಹಾದಿಮನಿಯವರಿಂದ ಇಂತಹ ಇನ್ನಷ್ಟು ಪ್ರಬುದ್ಧ ಕೃತಿಗಳು ಕನ್ನಡ ಸಾಹಿತ್ಯಕ್ಕೆ ಲಭಿಸಲಿ ಎಂಬ ಆಶಯ ಈ ಸಾಹಿತ್ಯಾವಲೋಕನದ ಸಮಾರೋಪವಾಗಿದೆ.

**-ಅಮೀರನಾಯಕ** (ಕಲ್ಲಿಗನೂರ), ಗದಗ

---

### ಸಂಕ್ಷಿಪ್ತ ಸುದ್ದಿಗಳು

## ರಾಷ್ಟ್ರ ಮಟ್ಟದ ಸ್ಪರ್ಧೆಯಲ್ಲಿ ಮಿಂಚಿದ ಚೇತನ್ ಕರಾಟೆ ಕ್ಲಬ್‌ನ ಪ್ರತಿಭೆಗಳು

# ಕರಾಟೆ ಕಣದಲ್ಲಿ ಲಕ್ಕುಂಡಿ ಪ್ರತಿಭೆಗಳ ಅಬ್ಬರ!

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಲಕ್ಕುಂಡಿಯ ಚೇತನ್ ಕರಾಟೆ ಕ್ಲಬ್‌ನಲ್ಲಿ ತರಬೇತಿ ಪಡೆದ ಕ್ರೀಡಾಪಟುಗಳು ಇತ್ತೀಚೆಗೆ ಗದಗದ ಕನಕ ಭವನದಲ್ಲಿ ಗೋಲ್ಡನ್ ಕರಾಟೆ ಕ್ಲಬ್ ಆಶ್ರಯದಲ್ಲಿ ನಡೆದ ರಾಷ್ಟ್ರ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಭಾಗವಹಿಸಿ ವಿವಿಧ ವಿಭಾಗಗಳಲ್ಲಿ ಪದಕಗಳನ್ನು ಗೆದ್ದು ಗಮನ ಸೆಳೆದಿದ್ದಾರೆ.

ಕುಮಿತೆ ಹಾಗೂ ಕಾಟಾ ವಿಭಾಗದಲ್ಲಿ ಸಮರ್ಥ ಕೌಜಗೇರಿ, ಚೇತನಕುಮಾರ ಮುಂದೇಲಿ ದ್ವಿತೀಯ ಸ್ಥಾನ, ದೀಕ್ಷಾ ಮುಂದೇಲಿ ತೃತೀಯ ಸ್ಥಾನ, ಪ್ರದ್ಯುಮ್ನ ತಿಮ್ಮಾಪೂರ ಕುಮಿತೆಯಲ್ಲಿ ಪ್ರಥಮ ಹಾಗೂ ಕಾಟಾದಲ್ಲಿ ತೃತೀಯ ಸ್ಥಾನ, ಜೀವನ್ ರಾಯಣ್ಣವರ ಎರಡೂ ವಿಭಾಗಗಳಲ್ಲಿ ತೃತೀಯ ಸ್ಥಾನ, ವಿನಯ ಚಬ್ಬರಭಾವಿ ಕುಮಿತೆಯಲ್ಲಿ ಪ್ರಥಮ ಹಾಗೂ ಕಾಟಾದಲ್ಲಿ ತೃತೀಯ ಸ್ಥಾನ, ವರುಣ ಹಿರೇಹಾಳ ಎರಡೂ ವಿಭಾಗಗಳಲ್ಲಿ ದ್ವಿತೀಯ ಸ್ಥಾನ, ಪ್ರಿಯಾಂಕ ನಂದಪ್ಪನವರ ಹಾಗೂ ಉಮೇರಾ ಯು.ಎನ್. ಎರಡೂ ವಿಭಾಗಗಳಲ್ಲಿ ಪ್ರಥಮ ಸ್ಥಾನ, ವಿರಾಟ್ ಚಬ್ಬರಭಾವಿ ಎರಡೂ ವಿಭಾಗಗಳಲ್ಲಿ ತೃತೀಯ ಸ್ಥಾನ ಹಾಗೂ ನಾಗರಾಜ ಕಟ್ಟಿ ಕುಮಿತೆಯಲ್ಲಿ ದ್ವಿತೀಯ ಮತ್ತು ಕಾಟಾದಲ್ಲಿ ತೃತೀಯ ಸ್ಥಾನ ಪಡೆದು ಸಾಧನೆ ಮೆರೆದಿದ್ದಾರೆ.

ಸಾಧನೆಗೈದ ಕ್ರೀಡಾಪಟುಗಳನ್ನು ಅಭಿನಂದಿಸಲು ಏರ್ಪಡಿಸಿದ್ದ ಸಮಾರಂಭದಲ್ಲಿ ಪಿಡಿಓ ಅಮೀರನಾಯಕ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ.ಎಸ್. ಪೂಜಾರ, ನೀಲಕಂಠ ಮುಕ್ಕಣವರ, ಅಶೋಕ ಬೂದಿಹಾಳ ಹಾಗೂ ಉಸ್ಮಾನಲಿ ನಮಾಜಿ ಅವರು ಕ್ರೀಡಾಪಟುಗಳನ್ನು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ಶಿಹಾನ್ ಹಬೀಬ ಹಾಗೂ ಗಂಗಾಧರ ಸಾಸ್ವಿಹಳ್ಳಿ ಅವರ ಸೇವೆಯನ್ನು ಗಣ್ಯರು ಶ್ಲಾಘಿಸಿದರು.

---

# ಕಸಾಪ 'ಮಾಸದ ಮಾತು' ಕಾರ್ಯಕ್ರಮ ಇಂದು

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ 'ಮಾಸದ ಮಾತು' ಕಾರ್ಯಕ್ರಮವನ್ನು ಆಗಸ್ಟ್ 2ರಂದು ಬೆಳಿಗ್ಗೆ 10.30ಕ್ಕೆ ನಗರದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿರುವ ಕಸಾಪ ಕಾರ್ಯಾಲಯದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಕವಿ, ಸಂಘಟಕ ಹಾಗೂ ಚಿಂತಕರಾದ, ಮೈಸೂರು ಖಜಾನೆ ಇಲಾಖೆಯ ಸಹನಿರ್ದೇಶಕ ವಿ. ಹರಿನಾಥಬಾಬು ಅವರು ಸಾಹಿತ್ಯ ಮತ್ತು ಸಮಕಾಲೀನ ವಿಚಾರಗಳ ಕುರಿತು ಉಪನ್ಯಾಸ ನೀಡಲಿದ್ದಾರೆ. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸಲಿದ್ದು, ಪರಿಷತ್ತಿನ ಸದಸ್ಯರು, ಸಾಹಿತ್ಯಾಭಿಮಾನಿಗಳು ಹಾಗೂ ಸಹೃದಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ ಹಾಗೂ ಡಿ.ಎಸ್. ಬಾಪುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



---

# ಲಕ್ಕುಂಡಿಯಲ್ಲಿ 'ಜನಪದ ವೈಭವ' ಉಪನ್ಯಾಸ ಮಾಲಿಕೆ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಅನಾದಿ ಕಾಲದಿಂದಲೂ ಮಾನವನ ಬದುಕಿನೊಂದಿಗೆ ಬೆಳೆದು ಬಂದಿರುವ ಜನಪದ ಕಲೆ ನಮ್ಮ ಸಂಸ್ಕೃತಿಯ ಜೀವನಾಡಿಯಾಗಿದ್ದು, ಅದು ಬದುಕಿನ ಮೌಲ್ಯಗಳನ್ನು ತಲೆಮಾರಿನಿಂದ ತಲೆಮಾರಿಗೆ ತಲುಪಿಸುವ ಶಕ್ತಿಯನ್ನು ಹೊಂದಿದೆ ಎಂದು ಗೋಟಗೋಡಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಸಹಾಯಕ ಕುಲಸಚಿವ ಶಹಜಹಾನ ಮುದಕವಿ ಹೇಳಿದರು.

ಗ್ರಾಮದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ನುಲಿ ಚಂದಯ್ಯ ಜಾನಪದ ಕಲಾ ಮೇಳ (ರಿ.) ಆಯೋಜಿಸಿದ್ದ 'ಜನಪದ ವೈಭವ' ಉಪನ್ಯಾಸ ಮಾಲಿಕೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಜನಪದ ಕಲೆ ಕುರಿತು ಆಸಕ್ತಿ ಬೆಳೆಸುವ ನುಲಿ ಚಂದಯ್ಯ ಜಾನಪದ ಕಲಾ ಮೇಳದ ಕಾರ್ಯ ಶ್ಲಾಘನೀಯವಾಗಿದೆ ಎಂದು ಅವರು ಹೇಳಿದರು.

ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯ ಶಂಕ್ರಣ್ಣ ಸಂಕಣ್ಣವರ ಮಾತನಾಡಿ, ಜನಪದ ಸಾಹಿತ್ಯದ ಒಳಾರ್ಥ ಅರಿತಾಗ ಬದುಕಿನ ನೈಜ ಮೌಲ್ಯಗಳು ಅನಾವರಣಗೊಳ್ಳುತ್ತವೆ. ಜನಪದ ಕಲೆ ಕೇವಲ ಮನರಂಜನೆಗೆ ಸೀಮಿತವಲ್ಲ; ಅದು ಜೀವನದ ಪಾಠಗಳನ್ನು ಹೇಳುವ ಸಂಸ್ಕೃತಿಯ ಕನ್ನಡಿ ಎಂದರು. ಬಳಿಕ ಜನಪದ ಹಾಡುಗಳ ಮೂಲಕ ವಿದ್ಯಾರ್ಥಿನಿಯರನ್ನು ರಂಜಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ರಂಗಕರ್ಮಿ ಮೌನೇಶ ಸಿ. ಬಡಿಗೇರ ಮಾತನಾಡಿ, ಪ್ರತಿಯೊಬ್ಬ ಮಗುವಿನಲ್ಲೂ ವಿಶಿಷ್ಟ ಪ್ರತಿಭೆ ಅಡಗಿದ್ದು, ಅದನ್ನು ಗುರುತಿಸಿ ಶ್ರದ್ಧೆ ಮತ್ತು ಬದ್ಧತೆಯಿಂದ ಬೆಳೆಸಿಕೊಂಡರೆ ಉನ್ನತ ಸಾಧನೆ ಸಾಧ್ಯ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಷಡಕ್ಷರಯ್ಯ ಬದ್ನಿಮಠ ಹಾಗೂ ಸಂಗಡಿಗರು ಜನಪದ ಮತ್ತು ತತ್ವಪದಗಳನ್ನು ಪ್ರಸ್ತುತಪಡಿಸಿದರು. ಜಿ.ಜಿ.ಎಚ್.ಎಸ್. ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ರಮಜಾನಸಾಬ ಹು. ತಹಶೀಲ್ದಾರ ಅಧ್ಯಕ್ಷತೆ ವಹಿಸಿದ್ದರು. ಮುಖ್ಯಗುರುಮಾತೆ ಜ್ಯೋತಿ ಆರ್. ಶೆಟ್ಟರ, ಜನಪದ ಕಲಾವಿದ ನಿಂಗಪ್ಪ ಗುಡ್ಡದ, ನುಲಿ ಚಂದಯ್ಯ ಜಾನಪದ ಕಲಾ ಮೇಳದ ಅಧ್ಯಕ್ಷ ಶಿವು ಭಜೆಂತ್ರಿ, ಪತ್ರಕರ್ತ ಈರಣ್ಣ ಕುಂಬಾರ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಶಿಕ್ಷಕ ಎಸ್.ಎಚ್. ಶೆಟ್ಟಿನಾಯ್ಕರ ಕಾರ್ಯಕ್ರಮ ನಿರೂಪಿಸಿದರು.




---

# ಶಿವ ದೇವಾಲಯದಲ್ಲಿ ವನಮಹೋತ್ಸವ




**ವಿಜಯಸಾಕ್ಷಿ ಸುದ್ದಿ, ಗದಗ**

ವಿಶ್ವ ಪರಿಸರ ದಿನದ ಅಂಗವಾಗಿ ನಗರದ ಶಿವ ಬಸವನಗರದ ಶ್ರೀ ಶಿವ ದೇವಾಲಯದ ಉದ್ಯಾನವನದಲ್ಲಿ ಶ್ರೀ ಶಿವ ಸೇವಾ ಟ್ರಸ್ಟ್ ಹಾಗೂ ಅರಣ್ಯ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ವನಮಹೋತ್ಸವ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ವಿವಿಧ ಜಾತಿಯ ನೂರಾರು ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆಯ ಸಂದೇಶ ಸಾರಲಾಯಿತು.

ಶ್ರೀ ಶಿವ ಸೇವಾ ಟ್ರಸ್ಟ್‌ನ ಗೌರವಾಧ್ಯಕ್ಷ ಹಾಗೂ ಹಿರಿಯ ವಕೀಲ ಎಸ್.ಜಿ. ಕೋತಂಬರಿ ಮಾತನಾಡಿ, ಅರಣ್ಯ ಇಲಾಖೆ ನೀಡಿರುವ ವಿವಿಧ ಜಾತಿಯ ಸಸಿಗಳನ್ನು ದೇವಾಲಯದ ಆವರಣದಲ್ಲಿ ನೆಟ್ಟು ಬೆಳೆಸುವುದರಿಂದ ಪರಿಸರದ ಜೊತೆಗೆ ದೇವಾಲಯದ ಸೌಂದರ್ಯವೂ ಹೆಚ್ಚುತ್ತದೆ.

ಮರಗಳು ಮಕ್ಕಳಿಗೆ, ಭಕ್ತರಿಗೆ ನೆರಳು, ಶುದ್ಧ ಗಾಳಿ ಮತ್ತು ಉತ್ತಮ ಪರಿಸರವನ್ನು ಒದಗಿಸುತ್ತವೆ. ಹಸಿರು ಪರಿಸರವನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಅರಣ್ಯ ಇಲಾಖೆಯ ಅಧಿಕಾರಿ ಯಲ್ಲಪ್ಪಗೌಡ ನಡುವಿನಮನಿ ಮಾತನಾಡಿ, ಸಾರ್ವಜನಿಕರು ಸಸಿ ನೆಡುವುದರ ಜೊತೆಗೆ ಅವುಗಳ ಸಂರಕ್ಷಣೆಗೆ ಮುಂದಾದರೆ ಅರಣ್ಯ ಇಲಾಖೆ ಅಗತ್ಯ ಸಹಕಾರ ನೀಡಲಿದೆ. ಸಸಿಗಳಿಗೆ ನೀರುಣಿಸುವುದು, ದನ-ಕರುಗಳಿಂದ ರಕ್ಷಿಸುವುದು ಸೇರಿದಂತೆ ಎಲ್ಲಾ ರೀತಿಯ ನೆರವು ನೀಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಟ್ರಸ್ಟ್ ಅಧ್ಯಕ್ಷ ಎಂ.ಟಿ. ಸೋರಿ, ಉಪಾಧ್ಯಕ್ಷ ರಾಮಣ್ಣ ಮಡಿವಾಳರ, ಕಾರ್ಯದರ್ಶಿ ಈರಣ್ಣ ಮಣಕವಾಡ, ಎಂ.ಎಸ್. ಕ್ಯಾಮನಗೌಡ್ರ, ಎಸ್.ಎಸ್. ಗಡ್ಡದಮಠ, ಬಸವರಾಜ ಚೌಡಕಿ, ಶೇಖಪ್ಪ ಕನ್ಯಾಳ, ಎಸ್.ಐ. ಚಳಗೇರಿ, ಆರ್.ವಿ. ನಾವಳ್ಳಿ, ಪಾಟೀಲ, ರುದ್ರೇಶ, ಅರಣ್ಯ ಇಲಾಖೆಯ ಸಿಬ್ಬಂದಿ, ಓಣಿಯ ಹಿರಿಯರು ಹಾಗೂ ಭಕ್ತರು ಪಾಲ್ಗೊಂಡಿದ್ದರು.

---

## ಸಂಘಟಿತ ಸಮಾಜದಿಂದಲೇ ಸನಾತನ ಸಂಸ್ಕೃತಿಯ ಉಳಿವು

# ಧರ್ಮ ರಕ್ಷಣೆಗೆ ಗುರು ಮಾರ್ಗವೇ ಶ್ರೇಷ್ಠ!

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗುರು-ಶಿಷ್ಯ ಪರಂಪರೆಯೇ ಭಾರತೀಯ ಧರ್ಮ, ಸಂಸ್ಕೃತಿ ಹಾಗೂ ಆಧ್ಯಾತ್ಮಿಕತೆಯ ಭದ್ರ ಬುನಾದಿಯಾಗಿದೆ. 'ಹರ ಮುನಿದರೆ ಗುರು ಕಾಯುವನು' ಎಂಬಂತೆ ಗುರು ಶಿಷ್ಯನ ಬದುಕಿಗೆ ದಾರಿದೀಪವಾಗಿದ್ದು, ಗುರು ತೋರಿದ ಧರ್ಮಮಾರ್ಗದಲ್ಲಿಯೇ ರಾಷ್ಟ್ರ ಮತ್ತು ಸಂಸ್ಕೃತಿಯ ರಕ್ಷಣೆ ಸಾಧ್ಯ, ಎಂದು ಹಿಂದೂ ಜನಜಾಗೃತಿ ಸಮಿತಿಯ ವಕ್ತಾರೆ ವಿದುಲಾ ಹಳದೀಪುರ ಹೇಳಿದರು.

ಪಟ್ಟಣದ ರಂಭಾಪುರಿ ಜಗದ್ಗುರು ವೀರಗಂಗಾಧರ ಸಮುದಾಯ ಭವನದಲ್ಲಿ ಹಿಂದೂ ಜನಜಾಗೃತಿ ಸಮಿತಿ ಆಯೋಜಿಸಿದ್ದ ಗುರುಪೂರ್ಣಿಮೆ ಮಹೋತ್ಸವದಲ್ಲಿ ಅವರು ಮಾತನಾಡಿದರು.

ಗುರುಗಳು ಜ್ಞಾನ ಹಾಗೂ ಆಧ್ಯಾತ್ಮಿಕ ಶಕ್ತಿಯ ಭಂಡಾರವಾಗಿದ್ದು, ಸಾಮಾನ್ಯ ವ್ಯಕ್ತಿಯನ್ನೂ ಆದರ್ಶ ವ್ಯಕ್ತಿತ್ವವಾಗಿ ರೂಪಿಸುವ ಸಾಮರ್ಥ್ಯ ಹೊಂದಿದ್ದಾರೆ. ಧರ್ಮೋ ರಕ್ಷತಿ ರಕ್ಷಿತಃ ಎಂಬ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಂಡು ಪ್ರತಿಯೊಬ್ಬರೂ ಧರ್ಮ ಹಾಗೂ ರಾಷ್ಟ್ರ ರಕ್ಷಣೆಗೆ ಕಂಕಣಬದ್ಧರಾಗಬೇಕು ಎಂದು ಹೇಳಿದರು.

ದೇಶ ಹಾಗೂ ಧರ್ಮದ ಮೇಲೆ ವಿವಿಧ ಸವಾಲುಗಳು ಎದುರಾಗುತ್ತಿರುವ ಸಂದರ್ಭದಲ್ಲಿ ಹಿಂದೂ ಸಮಾಜವು ಸ್ವಬೋಧ ಮತ್ತು ಶತ್ರುಬೋಧ ಬೆಳೆಸಿಕೊಂಡು ಸಂಘಟಿತರಾಗಬೇಕಿದೆ. ಸಮಾಜ ಸಂಘಟಿತವಾದಾಗ ಮಾತ್ರ ರಾಷ್ಟ್ರ ಮತ್ತು ಧರ್ಮದ ರಕ್ಷಣೆಗೆ ಬಲ ಸಿಗುತ್ತದೆ ಎಂದು ಅಭಿಪ್ರಾಯಪಟ್ಟರು.

ಪ್ರತಿಯೊಬ್ಬರೂ ಈಶ್ವರ ಪೂಜೆ, ಧ್ಯಾನ ಮತ್ತು ಪ್ರಾರ್ಥನೆಯ ಮೂಲಕ ಆಧ್ಯಾತ್ಮಿಕ ಶಕ್ತಿಯನ್ನು ವೃದ್ಧಿಸಿಕೊಳ್ಳಬೇಕು. ಮಕ್ಕಳಲ್ಲಿ ಬಾಲ್ಯದಿಂದಲೇ ನೈತಿಕ ಮೌಲ್ಯಗಳು, ಧರ್ಮಬೋಧನೆ ಹಾಗೂ ಗುರು-ಹಿರಿಯರ ಬಗ್ಗೆ ಗೌರವ ಬೆಳೆಸಬೇಕು ಎಂದು ಕರೆ ನೀಡಿದರು.

ಸಮಾಜಕ್ಕೆ ಒಳಿತಾಗುವ ಗುಣಗಳನ್ನು ಬೆಳೆಸಿಕೊಳ್ಳುವ ಜೊತೆಗೆ ಭಾರತದ ಸಾಂಸ್ಕೃತಿಕ ಪರಂಪರೆ ಉಳಿಸುವ ಕಾರ್ಯದಲ್ಲಿ ಎಲ್ಲರೂ ಕೈಜೋಡಿಸಬೇಕು. ಭಾರತ ಮಾತೆ, ಗೋ ರಕ್ಷಣೆ ಹಾಗೂ ಸಂಸ್ಕೃತಿ ಸಂರಕ್ಷಣೆಯಲ್ಲಿ ಯುವಕರ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಮುಂಬರುವ ತುರ್ತು ಪರಿಸ್ಥಿತಿಗಳು ಹಾಗೂ ಪ್ರಕೃತಿ ವಿಕೋಪಗಳನ್ನು ಗಮನದಲ್ಲಿಟ್ಟುಕೊಂಡು ಪ್ರತಿಯೊಬ್ಬರೂ ಪ್ರಥಮ ಚಿಕಿತ್ಸೆ, ಅಗ್ನಿಶಾಮಕ ಹಾಗೂ ಸ್ವರಕ್ಷಣಾ ತರಬೇತಿ ಪಡೆಯಬೇಕು ಎಂದು ಸಲಹೆ ನೀಡಿದರು.

ಯುವ ಮುಖಂಡ ಆದೇಶ ಹುಲಗೂರು ಮಾತನಾಡಿ, ಜಾತಿ-ಪಂಗಡಗಳ ಭೇದ ಮರೆತು ಹಿಂದೂ ಸಮಾಜ ಸಂಘಟಿತವಾದಾಗ ಮಾತ್ರ ಸಮಾಜದ ಮೇಲಿನ ಅನ್ಯಾಯ ಮತ್ತು ದೌರ್ಜನ್ಯಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವ್ಯಾಸಪೂಜೆ, ಗುರುಪೂಜೆ, ಧರ್ಮರಕ್ಷಕರ ಸತ್ಕಾರ, ಸ್ವರಕ್ಷಣಾ ಕೌಶಲ್ಯದ ಪ್ರಾತ್ಯಕ್ಷಿಕೆ, ಕಿರುಚಿತ್ರ ಹಾಗೂ ಗ್ರಂಥ ಪ್ರದರ್ಶನ ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆದವು.

ಶಂಕರ ಬ್ಯಾಡಗಿ, ದುಂಡಪ್ಪ ಸವಣೂರ, ಈರಣ್ಣ ಪೂಜಾರ, ವಿರೇಶ ಚಿಂಚಲಿ, ಪ್ರಕಾಶ ಬೆಟಗೇರಿ, ಮುರುಗೇಶ ರುದ್ರಶೆಟ್ಟಿ, ಶೋಭಾ ಇಟಗಿ, ಲಕ್ಷ್ಮೀ ತಟ್ಟಿ, ಬೇಬಿ ರುದ್ರಶೆಟ್ಟಿ, ಗೀತಾ ಬಡಿಗೇರ, ಅನುಸೂಯ ಸಜ್ಜನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



**ಗುರು ತೋರಿದ ಧರ್ಮಮಾರ್ಗದಲ್ಲಿಯೇ ನಡೆಯುವ ಮೂಲಕ ರಾಷ್ಟ್ರ ಮತ್ತು ಸಂಸ್ಕೃತಿಯನ್ನು ರಕ್ಷಿಸಬಹುದು. ಸಮಾಜ ಸಂಘಟಿತವಾದಾಗ ಮಾತ್ರ ಧರ್ಮದ ಮೇಲೆ ಬರುವ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಸಾಧ್ಯ.**

**- ವಿದುಲಾ ಹಳದೀಪುರ,**
ವಕ್ತಾರೆ, ಹಿಂದೂ ಜನಜಾಗೃತಿ ಸಮಿತಿ

## ಸಂಕ್ಷಿಪ್ತ ಸುದ್ದಿಗಳು

### ಸೆ. 12ರಂದು ವಿಜಯ ಲಲಿತಕಲಾ ಕಾಲೇಜಿನಲ್ಲಿ ಚಿತ್ರಕಲಾ ಸ್ಪರ್ಧೆ

**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಕರ ದಿನಾಚರಣೆ ಅಂಗವಾಗಿ ನಗರದ ರಾಜೀವಗಾಂಧಿ ನಗರದ ಟಿ.ಪಿ. ಅಕ್ಕಿ ರಸ್ತೆಯಲ್ಲಿರುವ ವಿಜಯ ಲಲಿತಕಲಾ ಕಾಲೇಜಿನಲ್ಲಿ ಸೆಪ್ಟೆಂಬರ್ 12ರಂದು ದ್ವಿತೀಯ ವರ್ಷದ ಪಿಯು ವಿದ್ಯಾರ್ಥಿಗಳಿಗಾಗಿ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಇನ್ನರ್ ವೀಲ್ ಕ್ಲಬ್, ರೋಟರಿ ಕ್ಲಬ್ ಹಾಗೂ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದಲ್ಲಿ ನಡೆಯುವ ಈ ಸ್ಪರ್ಧೆಯು ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ, ಕಲ್ಪನಾಶಕ್ತಿ ಹಾಗೂ ಆತ್ಮವಿಶ್ವಾಸವನ್ನು ಬೆಳೆಸುವ ಉದ್ದೇಶ ಹೊಂದಿದೆ. ಪರಿಸರ ಸಂರಕ್ಷಣೆ, ದೇಶಭಕ್ತಿ, ಸಾಮಾಜಿಕ ಜಾಗೃತಿ ಹಾಗೂ ಪ್ರಕೃತಿ ಸೌಂದರ್ಯ ಕುರಿತ ವಿಷಯಗಳ ಮೂಲಕ ವಿದ್ಯಾರ್ಥಿಗಳ ಕಲಾ ಪ್ರತಿಭೆಯನ್ನು ಅನಾವರಣಗೊಳಿಸಲು ಸ್ಪರ್ಧೆ ವೇದಿಕೆಯಾಗಲಿದೆ. ಸ್ಪರ್ಧೆಯಲ್ಲಿ ಭಾಗವಹಿಸಲು ಆಸಕ್ತ ವಿದ್ಯಾರ್ಥಿಗಳು ಆಗಸ್ಟ್ 30ರೊಳಗೆ ತಮ್ಮ ಹೆಸರು ಮತ್ತು ದೂರವಾಣಿ ಸಂಖ್ಯೆಯನ್ನು ನೋಂದಾಯಿಸಬೇಕು. ಮೊದಲು ನೋಂದಣಿ ಮಾಡಿಸಿಕೊಳ್ಳುವ 50 ವಿದ್ಯಾರ್ಥಿಗಳಿಗೆ ಮಾತ್ರ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದ್ದು, ವಿಜೇತರಿಗೆ ಆಕರ್ಷಕ ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು ಎಂದು ಸಂಸ್ಥೆಯ ಮುಖ್ಯಸ್ಥರು ತಿಳಿಸಿದ್ದಾರೆ.

### ಗದಗ ಉತ್ಸವ-2026ಕ್ಕೆ ತೋಂಟದ ಶ್ರೀಗಳಿಗೆ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಅವರ ನೇತೃತ್ವದ ನಿಯೋಗವು ಪೂಜ್ಯ ತೋಂಟದ ಸಿದ್ಧರಾಮ ಮಹಾಸ್ವಾಮಿಗಳನ್ನು ಭೇಟಿ ಮಾಡಿ, ಆಗಸ್ಟ್ 14ರಿಂದ 18ರವರೆಗೆ ನಡೆಯಲಿರುವ ಗದಗ ಉತ್ಸವ2026ರ ಉದ್ಘಾಟನಾ ಸಮಾರಂಭಕ್ಕೆ ಅಧಿಕೃತ ಆಹ್ವಾನ ನೀಡಿತು. ಆಹ್ವಾನವನ್ನು ಸ್ವೀಕರಿಸಿದ ಮಹಾಸ್ವಾಮಿಗಳು, ಗದಗ ಉತ್ಸವದಲ್ಲಿ ಭಾಗವಹಿಸಿ ತಮ್ಮ ಆಶೀರ್ವಾದ ನೀಡುವುದಾಗಿ ಸಮ್ಮತಿ ಸೂಚಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಮಾಜಿ ಅಧ್ಯಕ್ಷ ಮಧುಸೂದನ ಪುಣೇಕರ, ಉಪಾಧ್ಯಕ್ಷ ಜಯದೇವ ಮೆಣಸಗಿ, ತೃತೀಯ ಉಪಾಧ್ಯಕ್ಷ ಶಿದ್ರಾಮಪ್ಪ ಉಮಚಗಿ, ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಸಿಕಟ್ಟಿ, ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಕಾಳವಾಡ ಹಾಗೂ ದತ್ತಿ ಉಪನ್ಯಾಸ ಉಪಸಮಿತಿ ಅಧ್ಯಕ್ಷ ದಾನಯ್ಯ ವೀರಯ್ಯ ಗಣಾಚಾರಿ ಉಪಸ್ಥಿತರಿದ್ದರು.

### ಇಂದು ಹಾಲು ಉತ್ಪಾದಕರಿಗೆ ಜಿಲ್ಲಾ ಮಟ್ಟದ ವಿಶೇಷ ತರಬೇತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಧಾರವಾಡ, ಗದಗ ಮತ್ತು ಉತ್ತರ ಕನ್ನಡ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಆಗಸ್ಟ್ 2ರಂದು ಬೆಳಿಗ್ಗೆ 10.30ಕ್ಕೆ ನರಗುಂದ ತಾಲೂಕು ಪಂಚಾಯತ್ ಸಭಾಭವನದಲ್ಲಿ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಶಿಬಿರ ಆಯೋಜಿಸಲಾಗಿದೆ. ಶಿಬಿರದಲ್ಲಿ ನರಗುಂದ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರು ಹಾಗೂ ಹಾಲು ಪರೀಕ್ಷಕರು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಿ.ಎಂ. ಪಾಟೀಲ ವಹಿಸಲಿದ್ದು, ಎಚ್.ಜಿ. ಹಿರೇಗೌಡ್ರ ಉದ್ಘಾಟಿಸಲಿದ್ದಾರೆ. ಜಾನುವಾರುಗಳ ರೋಗ ನಿಯಂತ್ರಣ, ಹಸಿರು ಮೇವಿನ ಮಹತ್ವ ಹಾಗೂ ಶುದ್ಧ ಮತ್ತು ಅಧಿಕ ಹಾಲು ಉತ್ಪಾದನೆ ಕುರಿತು ತಜ್ಞರು ಉಪನ್ಯಾಸ ನೀಡಲಿದ್ದಾರೆ ಎಂದು ಗದಗ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ತಿಳಿಸಿದ್ದಾರೆ.

### ನಿಧನ

#### ಶಿವಮ್ಮ ಗರ್ಜಪ್ಪನವರ



**ಲಕ್ಕುಂಡಿ:** ಗ್ರಾಮದ ಕುರುಬರ ಓಣಿಯ ನಿವಾಸಿ ಶಿವಮ್ಮ ಹನುಮಪ್ಪ ಗರ್ಜಪ್ಪನವರ (80) ಅವರು ಶುಕ್ರವಾರ ನಿಧನರಾದರು.

ಮೃತರು ಮೂವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

### ಆ.8ರಿಂದ ರಾಜ್ಯಮಟ್ಟದ ಎಂಟಿಬಿ ಸೈಕ್ಲಿಂಗ್ ಚಾಂಪಿಯನ್‌ಶಿಪ್



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಕರ್ನಾಟಕ ರಾಜ್ಯ ಅಮೆಚೂರ್ ಸೈಕ್ಲಿಂಗ್ ಅಸೋಸಿಯೇಷನ್ ಹಾಗೂ ಗದಗ ಜಿಲ್ಲಾ ಅಮೆಚೂರ್ ಸೈಕ್ಲಿಂಗ್ ಅಸೋಸಿಯೇಷನ್ (ರಿ) ಸಂಯುಕ್ತ ಆಶ್ರಯದಲ್ಲಿ 21ನೇ ರಾಜ್ಯಮಟ್ಟದ ಎಂಟಿಬಿ (ಮೌಂಟನ್ ಬೈಕ್) ಸೈಕ್ಲಿಂಗ್ ಚಾಂಪಿಯನ್‌ಶಿಪ್ ಆಗಸ್ಟ್ 8 ಮತ್ತು 9ರಂದು ಮುಳಗುಂದ ಸಮೀಪದ ಯಲಿಶಿರೂರು ಗುಡ್ಡಗಾಡು ಪ್ರದೇಶದಲ್ಲಿ ನಡೆಯಲಿದೆ.

ರಾಜ್ಯದ 20 ಜಿಲ್ಲೆಗಳಿಂದ ಆಯ್ಕೆಯಾದ ಸೈಕ್ಲಿಸ್ಟ್‌ಗಳು ಈ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಲಿದ್ದು, 14, 16 ಹಾಗೂ 18 ವರ್ಷದೊಳಗಿನ ಬಾಲಕ-ಬಾಲಕಿಯರ ವಿಭಾಗಗಳ ಜೊತೆಗೆ ಮಹಿಳೆಯರ ಹಾಗೂ ಓಪನ್ ವಿಭಾಗದಲ್ಲೂ ಸ್ಪರ್ಧೆಗಳು ನಡೆಯಲಿವೆ. ಇದೇ ಸಂದರ್ಭದಲ್ಲಿ ರಾಷ್ಟ್ರಮಟ್ಟದ ಮೌಂಟನ್ ಬೈಕ್ ಚಾಂಪಿಯನ್‌ಶಿಪ್‌ಗೆ ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆಯೂ ನಡೆಯಲಿದೆ. ಲೋಗೋ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಅಮೆಚೂರ್ ಸೈಕ್ಲಿಂಗ್ ಅಸೋಸಿಯೇಷನ್ ಪ್ರಧಾನ ಕಾರ್ಯದರ್ಶಿ ಎಂ.ಐ. ಕಣಕಿ, ಮುಳಗುಂದದ ಕ್ರೀಡಾಪಟುಗಳು ಈಗಾಗಲೇ ರಾಜ್ಯ ಮಟ್ಟದಲ್ಲಿ ಆಯ್ಕೆಯಾಗಿದ್ದು, ರಾಷ್ಟ್ರಮಟ್ಟದ ಎಂಟಿಬಿ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಚಾಂಪಿಯನ್‌ಶಿಪ್ ಯಶಸ್ವಿ ಆಯೋಜನೆಗೆ ಅಗತ್ಯವಿರುವ ಎಲ್ಲ ಪೂರ್ವಸಿದ್ಧತೆಗಳನ್ನು ಪೂರ್ಣಗೊಳಿಸಲಾಗಿದೆ ಎಂದು ತಿಳಿಸಿದರು. ಲೋಗೋ ಬಿಡುಗಡೆ ಕಾರ್ಯಕ್ರಮದಲ್ಲಿ ಎಂ.ಡಿ. ಬಟ್ಟೂರ, ವಿಜಯ ನೀಲಗುಂದ, ನಾಗರಾಜ ದೇಶಪಾಂಡೆ, ರಾಮಣ್ಣ ಕಾಮಾಜಿ, ಬಸವರಾಜ ಮಣ್ಣೂರ, ಚನ್ನಪ್ಪ ಅಂಗಡಿ, ಪರಶುರಾಮ ವಂಟಕರ, ಬಸವರಾಜ ಹಾರೋಗೇರಿ, ಎಸ್.ವಿ. ಕಣವಿ, ಎಸ್.ಎಂ. ಉಮ್ಮಣ್ಣವರ, ನಿಂಗಪ್ಪ ತೆರಿನಗಡ್ಡಿ, ಚಂದ್ರಶೇಖರ ದೊಡ್ಡಮನಿ, ದಾವಲಸಾಬ ಕುರ್ತಕೋಟಿ, ನಿಜಗುಣೆಪ್ಪ ಕಂಬಳಿ, ಎಸ್.ಎಸ್. ಕಪ್ಪತ್ತನವರ, ಶರಣಬಸಪ್ಪ ಮ್ಯಾಲಿನಮನಿ, ಇಸ್ಮಾಯಿಲ್ ಖಾಗದ ಹಾಗೂ ವಿ.ಡಿ. ಕಣವಿ ಉಪಸ್ಥಿತರಿದ್ದರು.

---

ಬಾಲ್ಯದ ನೆನಪುಗಳ ಮೆಲುಕು, ಗುರುಗಳಿಗೆ ಗೌರವ, ಪರಿಸರ ಉಳಿವಿಗೆ ಹಸಿರು ಹೆಜ್ಜೆ

# ಅಕ್ಷರ ಕಲಿಸಿದ ಶಾಲೆಗೆ ಮರಳಿದ ಶಿಷ್ಯರು!






**ವಿಜಯಸಾಕ್ಷಿ ಸುದ್ದಿ, ಗದಗ**

ಬದುಕಿನ ಹಾದಿಗಳು ಬದಲಾಗಿದ್ದರೂ ಅಕ್ಷರ ಕಲಿಸಿದ ಶಾಲೆ, ಬದುಕಿಗೆ ದಾರಿ ತೋರಿದ ಗುರುಗಳು ಮತ್ತು ಬಾಲ್ಯದ ಸ್ನೇಹ ಎಂದಿಗೂ ಮರೆಯಾಗುವುದಿಲ್ಲ ಎಂಬುದನ್ನು ಗದಗದ ಶ್ರೀ ಸಿ.ಡಿ.ಒ. ಜೈನ್ ಎಜುಕೇಶನ್ ಸೊಸೈಟಿ ಪ್ರೌಢಶಾಲೆಯ 2006ನೇ ಸಾಲಿನ ಹಳೆಯ ವಿದ್ಯಾರ್ಥಿಗಳು ಮತ್ತೊಮ್ಮೆ ಸಾಬೀತುಪಡಿಸಿದರು.

ಶಾಲೆಯಲ್ಲಿ ಆಯೋಜಿಸಿದ್ದ 'ಗುರುವಂದನೆ ಹಾಗೂ ಸ್ನೇಹಿತರ ಸಮ್ಮಿಲನ' ಕಾರ್ಯಕ್ರಮದಲ್ಲಿ ಸುಮಾರು 20 ವರ್ಷಗಳ ಬಳಿಕ ಒಂದಾದ ಸಹಪಾಠಿಗಳು ತಮ್ಮ ಶಾಲಾ ದಿನಗಳ ಸಿಹಿ ನೆನಪುಗಳನ್ನು ಮೆಲುಕು ಹಾಕಿ ಭಾವುಕರಾದರು. ವಿವಿಧ ಉದ್ಯೋಗ, ವ್ಯಾಪಾರ ಹಾಗೂ ಸೇವಾ ಕ್ಷೇತ್ರಗಳಲ್ಲಿ ನೆಲೆಸಿರುವ ವಿದ್ಯಾರ್ಥಿಗಳು ಮತ್ತೆ ಅದೇ ಶಾಲೆಯಂಗಳದಲ್ಲಿ ಭೇಟಿಯಾದ ಕ್ಷಣಗಳು ಭಾವನಾತ್ಮಕ ವಾತಾವರಣ ನಿರ್ಮಿಸಿದವು.

ಕಾರ್ಯಕ್ರಮದ ಆರಂಭದಲ್ಲಿ ಅಗಲಿದ ಶಿಕ್ಷಕರಿಗೆ ಮೌನಾಚರಣೆ ಮೂಲಕ ಗೌರವ ಸಲ್ಲಿಸಲಾಯಿತು. ಶಿಕ್ಷಣದ ಮೂಲಕ ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾಗಿದ್ದ ಗುರುಗಳ ಸೇವೆಯನ್ನು ಸ್ಮರಿಸಿ, ಅವರ ಆದರ್ಶಗಳು ಮುಂದಿನ ಪೀಳಿಗೆಗೆ ಸದಾ ಪ್ರೇರಣೆಯಾಗಲಿ ಎಂದು ಆಶಯ ವ್ಯಕ್ತಪಡಿಸಲಾಯಿತು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ಶಾಲೆಯ ನಿವೃತ್ತ ಹಾಗೂ ಹಾಲಿ ಶಿಕ್ಷಕರನ್ನು ಹೂಮಾಲೆ, ಶಾಲು ಮತ್ತು ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು.

ವಿದ್ಯಾರ್ಥಿಗಳು ತಮ್ಮ ಗುರುಗಳ ಪಾದಸ್ಪರ್ಶ ಮಾಡಿ ಆಶೀರ್ವಾದ ಪಡೆದರು. ಹಲವು ವರ್ಷಗಳ ಬಳಿಕ ತಮ್ಮ ವಿದ್ಯಾರ್ಥಿಗಳನ್ನು ಒಂದೇ ವೇದಿಕೆಯಲ್ಲಿ ಕಂಡ ಶಿಕ್ಷಕರು ಸಂತಸ ವ್ಯಕ್ತಪಡಿಸಿದರು.

ಸುಮಾರು ಎರಡು ದಶಕಗಳ ಹಿಂದೆ ಒಂದೇ ತರಗತಿಯಲ್ಲಿ ಓದಿದ ಸ್ನೇಹಿತರು ಮತ್ತೆ ಭೇಟಿಯಾಗಿ ಹಳೆಯ ತರಗತಿ ಕೊಠಡಿಗಳು, ಬ್ಲ್ಯಾಕ್‌ಬೋರ್ಡ್, ಬೆಂಚುಗಳು, ಶಿಕ್ಷಕರ ಬೋಧನೆ, ಶಾಲೆಯ ತುಂಟಾಟ, ಶಿಕ್ಷೆ ಹಾಗೂ ಆಟದ ದಿನಗಳನ್ನು ನೆನೆದು ನಗೆಗಡಲಲ್ಲಿ ತೇಲಿದರು. ಹಲವು ವರ್ಷಗಳ ಬಳಿಕ ಭೇಟಿಯಾದ ಸ್ನೇಹಿತರು ಪರಸ್ಪರ ಆತ್ಮೀಯವಾಗಿ ಅಪ್ಪಿಕೊಂಡ ದೃಶ್ಯ ಕಾರ್ಯಕ್ರಮದ ವಿಶೇಷವಾಗಿತ್ತು.

ದೇಶದ ವಿವಿಧ ಭಾಗಗಳಲ್ಲಿ ನೆಲೆಸಿರುವ ಹಳೆಯ ವಿದ್ಯಾರ್ಥಿಗಳು ವಾಟ್ಸಾಪ್ ಗುಂಪಿನ ಮೂಲಕ ಸಂಪರ್ಕ ಸಾಧಿಸಿ ಈ ಕಾರ್ಯಕ್ರಮವನ್ನು ಸಂಘಟಿಸಿದ್ದರು.

ಕಾರ್ಯಕ್ರಮದ ಸ್ಮರಣಾರ್ಥ ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆಗಳನ್ನು ವಿತರಿಸಲಾಯಿತು.

ನಾವು ಕಲಿಸಿದ ಅಕ್ಷರಗಳು ಇಂದು ಸಮಾಜದಲ್ಲಿ ಉತ್ತಮ ವ್ಯಕ್ತಿತ್ವವಾಗಿ ರೂಪುಗೊಂಡಿರುವುದನ್ನು ನೋಡುವುದೇ ಶಿಕ್ಷಕರಿಗೆ ಸಿಗುವ ಅತ್ಯಂತ ದೊಡ್ಡ ಗೌರವ ಎಂದು ಶಿಕ್ಷಕರು ಸಂತಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಕೋಲಾರ ಮೇಡಂ, ಜೋಷಿ ಮೇಡಂ, ಮಾನ್ವಿ ಸರ್, ರಡ್ಡಿ ಸರ್ ಹಾಗೂ ಹಳೆಯ ವಿದ್ಯಾರ್ಥಿಗಳಾದ ಈ. ಜೆತಿಂದ್ರ, ಅಜಯ್ ಅಬ್ಬಿಗೇರಿ, ಆನಂದ್, ವಿಕಾಸ್, ಉದಯ್, ರಾಜೀವ್, ರೀಮಾ, ಪ್ರಿಯಾ, ದೀಪ, ಪ್ರತಿಭಾ ಸೇರಿದಂತೆ ಹಲವು ವಿದ್ಯಾರ್ಥಿಗಳು ಭಾಗವಹಿಸಿದ್ದರು.

**ಪರಿಸರ ಸಂರಕ್ಷಣೆಗೆ ಹಸಿರು ಸಂಕಲ್ಪ**

**ಗುರುವಂದನೆ ಕಾರ್ಯಕ್ರಮದ ಅಂಗವಾಗಿ ಶಾಲಾ ಆವರಣದಲ್ಲಿ ಗುರುಗಳು ಹಾಗೂ ಹಳೆಯ ವಿದ್ಯಾರ್ಥಿಗಳು ಸಸಿ ನೆಟ್ಟು ಪರಿಸರ ಸಂರಕ್ಷಣೆಯ ಸಂಕಲ್ಪ ಕೈಗೊಂಡರು. ಒಬ್ಬ ವಿದ್ಯಾರ್ಥಿ ಒಂದು ಸಸಿ ಎಂಬ ಸಂದೇಶದೊಂದಿಗೆ ಹಸಿರು ಉಳಿಸುವ ಜವಾಬ್ದಾರಿಯನ್ನು ಸಮಾಜಕ್ಕೆ ಸಾರಿದರು.**

---

## ರೈಲ್ವೆಗಾಗಿ ದೆಹಲಿ ಚಲೋ ಹೋರಾಟಕ್ಕೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗಹರಪನಹಳ್ಳಿ ನೂತನ ರೈಲ್ವೆ ಮಾರ್ಗ ಕಾಮಗಾರಿಯನ್ನು ತಕ್ಷಣ ಆರಂಭಿಸಿ ಅಗತ್ಯ ಅನುದಾನ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿ ಮುಂಡರಗಿ ತಾಲೂಕು ರೈಲ್ವೆ ಹೋರಾಟ ಸಮಿತಿ 'ದೆಹಲಿ ಚಲೋ' ಅಭಿಯಾನಕ್ಕೆ ಚಾಲನೆ ನೀಡಿದೆ.

ಸಮಿತಿಯ ಅಧ್ಯಕ್ಷ ಬಸವರಾಜ ಎಸ್. ದೇಸಾಯಿ ನೇತೃತ್ವದ ನಿಯೋಗವು ಸಂಪರ್ಕ ಕ್ರಾಂತಿ ಎಕ್ಸ್‌ಪ್ರೆಸ್ ರೈಲಿನ ಮೂಲಕ ನವದೆಹಲಿಗೆ ಪ್ರಯಾಣ ಬೆಳೆಸಿದ್ದು, ಕೇಂದ್ರ ರೈಲ್ವೆ ಸಚಿವರು ಹಾಗೂ ರೈಲ್ವೆ ಮಂಡಳಿಯ ಉನ್ನತ ಅಧಿಕಾರಿಗಳನ್ನು ಭೇಟಿ ಮಾಡಿ ಯೋಜನೆಗೆ ಸಂಬಂಧಿಸಿದ ಮನವಿ ಸಲ್ಲಿಸಲು ನಿರ್ಧರಿಸಿದೆ. ನಿಯೋಗದಲ್ಲಿ ಮುತ್ತಪ್ಪ ಪಾವಡಶೆಟ್ಟಿ, ನಿತಿನ್ ವಿ. ದೊಡ್ಡಣ್ಣವರ, ಧವಳ ಸಾಹೇಬ್ ಮುಲ್ಲಾ, ಸಚಿನ್‌ಕುಮಾರ್ ಬಿ. ದೇಸಾಯಿ ಸೇರಿದಂತೆ ಸಮಿತಿಯ ಪ್ರಮುಖ ಸದಸ್ಯರು ಪಾಲ್ಗೊಂಡಿದ್ದಾರೆ. ದೆಹಲಿಯಲ್ಲಿ ಧರಣಿ ನಡೆಸುವ ಮೂಲಕ ಯೋಜನೆಯನ್ನು ತ್ವರಿತಗೊಳಿಸುವಂತೆ ಕೇಂದ್ರ ಸರ್ಕಾರದ ಗಮನ ಸೆಳೆಯಲು ಸಮಿತಿ ಮುಂದಾಗಿದೆ.

ಗದಗಹರಪನಹಳ್ಳಿ ರೈಲು ಮಾರ್ಗವು ಮುಂಡರಗಿ ಹಾಗೂ ಹೂವಿನಹಡಗಲಿ ಭಾಗದ ಜನರ ಬಹುಕಾಲದ ಬೇಡಿಕೆಯಾಗಿದ್ದು, ಈ ಯೋಜನೆ ಜಾರಿಯಾದರೆ ಗ್ರಾಮೀಣ ಪ್ರದೇಶದ ಸಂಚಾರ, ರೈತರ ಕೃಷಿ ಉತ್ಪನ್ನಗಳ ಸಾಗಣೆ ಹಾಗೂ ಪ್ರಾದೇಶಿಕ ಆರ್ಥಿಕ ಅಭಿವೃದ್ಧಿಗೆ ಹೊಸ ಉತ್ತೇಜನ ದೊರೆಯಲಿದೆ ಎಂದು ಸಮಿತಿ ತಿಳಿಸಿದೆ.

**ರೈಲ್ವೆ ಸಂಪರ್ಕದ ವಿಷಯದಲ್ಲಿ ಈ ಭಾಗದ ಜನರು ದಶಕಗಳಿಂದ ನಿರ್ಲಕ್ಷ್ಯ ಅನುಭವಿಸುತ್ತಿದ್ದಾರೆ. ಗದಗಹರಪನಹಳ್ಳಿ ರೈಲು ಮಾರ್ಗ ಈ ಭಾಗದ ಅಭಿವೃದ್ಧಿಗೆ ಜೀವನಾಡಿಯಾಗಲಿದೆ. ಸರ್ಕಾರದಿಂದ ಶೀಘ್ರ ಸ್ಪಂದನೆ ದೊರೆಯದಿದ್ದರೆ ನಮ್ಮ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುತ್ತೇವೆ.**

**- ಬಸವರಾಜ ಎಸ್. ದೇಸಾಯಿ,**
ಅಧ್ಯಕ್ಷರು, ಮುಂಡರಗಿ ತಾಲೂಕು ರೈಲ್ವೆ ಹೋರಾಟ ಸಮಿತಿ

---

## ಆ. 23ರಂದು 2111ನೇ ಮದ್ಯವರ್ಜನ ಶಿಬಿರ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ವತಿಯಿಂದ ಆಗಸ್ಟ್ 23ರಂದು ನಡೆಯಲಿರುವ 2111ನೇ ಮದ್ಯವರ್ಜನ ಶಿಬಿರದ ಯಶಸ್ವಿ ಆಯೋಜನೆಗಾಗಿ ಪಟ್ಟಣದ ಹಳೇ ಊರಿನ ಪುರಸಭೆ ಸಭಾಭವನದಲ್ಲಿ ಶುಕ್ರವಾರ ಪೂರ್ವಭಾವಿ ಸಭೆ ನಡೆಯಿತು.

ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ರಾಜ್ಯ ಸಂಘಟನಾ ಅಧ್ಯಕ್ಷ ನಟರಾಜ್ ಬಾದಾಮಿ, ಮದ್ಯವರ್ಜನ ಶಿಬಿರಗಳು ಸಮಾಜದಲ್ಲಿ ಆರೋಗ್ಯಕರ ಹಾಗೂ ಜಾಗೃತ ಬದುಕಿನ ನಿರ್ಮಾಣಕ್ಕೆ ಮಹತ್ವದ ಪಾತ್ರ ವಹಿಸುತ್ತಿವೆ. ಆಗಸ್ಟ್ 23ರಂದು ನಡೆಯಲಿರುವ 2111ನೇ ಶಿಬಿರದಲ್ಲಿ ಗ್ರಾಮದ ಪ್ರತಿಯೊಬ್ಬರೂ ಹಾಗೂ ಸಂಪನ್ಮೂಲ ವ್ಯಕ್ತಿಗಳು ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಸಭೆಯಲ್ಲಿ ಶಿಬಿರದ ನೂತನ ವ್ಯವಸ್ಥಾಪನಾ ಸಮಿತಿಯನ್ನು ರಚಿಸಲಾಗಿದ್ದು, ಚಂದ್ರಶೇಖರ ಅವರನ್ನು ಶಿಬಿರದ ಅಧ್ಯಕ್ಷರಾಗಿ ಆಯ್ಕೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ವಿಜಯನಗರ ಜಿಲ್ಲಾ ನಿರ್ದೇಶಕ ಸತೀಶ್ ಶೆಟ್ಟಿ, ತಾಲೂಕು ಯೋಜನಾಧಿಕಾರಿ ಚಂದ್ರಶೇಖರ, ಕೊಪ್ಪಳ ಪ್ರಾದೇಶಿಕ ವ್ಯಾಪ್ತಿಯ ಜನಜಾಗೃತಿ ವೇದಿಕೆಯ ಯೋಜನಾಧಿಕಾರಿ ನಾಗೇಶ್, ಪುರಸಭೆ ಅಧ್ಯಕ್ಷರು, ಸದಸ್ಯರು, ಜನಜಾಗೃತಿ ವೇದಿಕೆಯ ಪದಾಧಿಕಾರಿಗಳು, ಸಂಪನ್ಮೂಲ ವ್ಯಕ್ತಿಗಳು, ವಿವಿಧ ಇಲಾಖೆಗಳ ಮೇಲ್ವಿಚಾರಕರು, ಸೇವಾ ಪ್ರತಿನಿಧಿಗಳು ಹಾಗೂ ಊರಿನ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

---

## ಗುರುವಿನ ಮಾರ್ಗದರ್ಶನವೇ ಬದುಕಿನ ಬೆಳಕು ಕೌಶಲ್ಯವೇ ಯಶಸ್ಸಿನ ನಿಜವಾದ ಮಾನದಂಡ




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಸ್ಕೂಲ್ ಚಂದನದಲ್ಲಿ ಗುರುಪೂರ್ಣಿಮೆ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿಜಯಪುರ ಶಾಂತಿ ಕುಟೀರದ ಶ್ರೀ ಶ್ರೀಕೃಷ್ಣ ಗುರೂಜಿ ವಿದ್ಯಾರ್ಥಿಗಳಿಗೆ ಆಶೀರ್ವಚನ ನೀಡಿ ಮಾತನಾಡಿದರು.

ಗುರು ಕೇವಲ ವ್ಯಕ್ತಿಯಲ್ಲ, ಅಜ್ಞಾನವೆಂಬ ಕತ್ತಲೆಯನ್ನು ದೂರ ಮಾಡಿ ಜ್ಞಾನದ ಬೆಳಕು ಹರಡುವ ದಿವ್ಯಶಕ್ತಿ. ಗುರುವಿನ ಮೇಲಿನ ಶ್ರದ್ಧೆ, ಭಕ್ತಿ ಹಾಗೂ ಸಮರ್ಪಣಾಭಾವದಿಂದ ಬದುಕನ್ನು ರೂಪಿಸಿಕೊಂಡಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ ಎಂದು ಹೇಳಿದರು.

ವಿದ್ಯಾರ್ಥಿಗಳು ಅಂಕಗಳ ಹಿಂದೆ ಮಾತ್ರ ಓಡದೆ ಕೌಶಲ್ಯ, ಆತ್ಮವಿಶ್ವಾಸ ಹಾಗೂ ಉತ್ತಮ ವ್ಯಕ್ತಿತ್ವ ಬೆಳೆಸಿಕೊಳ್ಳಬೇಕು. ಶಿಸ್ತು, ಸಮಯಪಾಲನೆ, ಪರಿಶ್ರಮ ಮತ್ತು ಏಕಾಗ್ರತೆ ಯಶಸ್ಸಿನ ಭದ್ರ ಬುನಾದಿಯಾಗಿದ್ದು, ದೊಡ್ಡ ಗುರಿಯೊಂದಿಗೆ ಮುನ್ನಡೆದರೆ ಸಾಧನೆ ಸಾಧ್ಯ ಎಂದರು. ಮೊಬೈಲ್‌ನ ಅತಿಯಾದ ಬಳಕೆ ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಾರಕವಾಗಬಹುದು. ಸಮಯವನ್ನು ಸದುಪಯೋಗಪಡಿಸಿಕೊಂಡು ಜ್ಞಾನ, ಸಂಸ್ಕಾರ ಮತ್ತು ರಾಷ್ಟ್ರಸೇವೆಯ ಮನೋಭಾವ ಬೆಳೆಸಿಕೊಳ್ಳಬೇಕು. ತಂದೆ-ತಾಯಿ ಹಾಗೂ ಗುರುಗಳು ಮಕ್ಕಳ ಮೊದಲ ಆದರ್ಶವಾಗಿದ್ದು, ಅವರ ಬಗ್ಗೆ ಸದಾ ಕೃತಜ್ಞತಾಭಾವ ಹೊಂದಿರಬೇಕು ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಮಾಜಿ ಶಾಸಕ ಹಾಗೂ ಕೆಎಲ್‌ಇ ನಿರ್ದೇಶಕ ವಿ.ಐ. ಪಾಟೀಲ, ವಿದ್ಯಾರ್ಥಿ ಜೀವನದಲ್ಲಿ ಶಿಸ್ತು, ಸತತ ಅಭ್ಯಾಸ ಮತ್ತು ಉತ್ತಮ ಸಂಸ್ಕಾರ ಅಳವಡಿಸಿಕೊಂಡರೆ ಉಜ್ವಲ ಭವಿಷ್ಯ ನಿರ್ಮಿಸಿಕೊಳ್ಳಬಹುದು.

ಇಂದಿನ ಯುವಜನತೆ ದುಶ್ಚಟಗಳಿಗೆ ಬಲಿಯಾಗುತ್ತಿರುವುದು ಕಳವಳಕಾರಿ ಬೆಳವಣಿಗೆಯಾಗಿದ್ದು, ಮಕ್ಕಳಲ್ಲಿ ಜೀವನ ಮೌಲ್ಯಗಳನ್ನು ಬೆಳೆಸುವ ಹೊಣೆಗಾರಿಕೆ ಪೋಷಕರು ಹಾಗೂ ಶಿಕ್ಷಕರ ಮೇಲಿದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥಾಪಕ ಟಿ. ಈಶ್ವರ ಮಾತನಾಡಿ, ಸ್ಕೂಲ್ ಚಂದನದಲ್ಲಿ ಪಠ್ಯ ಶಿಕ್ಷಣದ ಜೊತೆಗೆ ಸಂಸ್ಕಾರ, ನಾಯಕತ್ವ, ಆತ್ಮವಿಶ್ವಾಸ, ಸೃಜನಶೀಲತೆ ಹಾಗೂ ಜೀವನ ಕೌಶಲ್ಯ ಬೆಳೆಸುವ ಶಿಕ್ಷಣಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ 'ಚಂದನ-ಸ್ಪಂದನ' ಸಂವಾದ ಕಾರ್ಯಕ್ರಮ ನಡೆಯಿತು. ವಿದ್ಯಾರ್ಥಿಗಳು ಶ್ರೀಕೃಷ್ಣ ಗುರೂಜಿ ಹಾಗೂ ವಿ.ಐ. ಪಾಟೀಲ ಅವರಿಗೆ ಪ್ರಶ್ನೆಗಳನ್ನು ಕೇಳಿ ಮಾರ್ಗದರ್ಶನ ಪಡೆದರು. ಬಳಿಕ ಇಬ್ಬರನ್ನೂ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರೀತಿ ಪಾಟೀಲ, ಎ.ಬಿ. ಉಪ್ಪಿನ, ಗಿರಿಜಾ ಟಿ. ಈಶ್ವರ, ಚಂದನ ಐ., ಪ್ರಾಚಾರ್ಯ ಆರ್.ಜಿ. ಭಾವನವರ, ಶಿಕ್ಷಕರು, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಶಾಲೆಯ ಬ್ಯಾಂಡ್ ತಂಡ ಅತಿಥಿಗಳನ್ನು ಸ್ವಾಗತಿಸಿದ್ದು ವಿಶೇಷ ಆಕರ್ಷಣೆಯಾಗಿತ್ತು.

**ಅಂಕಗಳಿಗಿಂತ ಕೌಶಲ್ಯ ಮುಖ್ಯ. ಗುರುವಿನ ಮಾರ್ಗದರ್ಶನ, ಶಿಸ್ತು, ಆತ್ಮವಿಶ್ವಾಸ ಮತ್ತು ನಿರಂತರ ಪರಿಶ್ರಮವೇ ವಿದ್ಯಾರ್ಥಿಗಳ ಯಶಸ್ಸಿನ ನಿಜವಾದ ಗುಟ್ಟು.**

**- ಶ್ರೀ ಶ್ರೀಕೃಷ್ಣ ಗುರೂಜಿ,**
ವಿಜಯಪುರ ಶಾಂತಿ ಕುಟೀರ

---

## ತೆರೆಗೆ ಬರಲು ಸಜ್ಜಾದ ಧ್ರುವ ನಕ್ಷತ್ರ

**ವಿಜಯಸಾಕ್ಷಿ ಸುದ್ದಿ, ಹನೂರು**

ಬಿ.ವಿ. ಕಂಬೈನ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಬಹುನಿರೀಕ್ಷಿತ ಕನ್ನಡ ಚಲನಚಿತ್ರ ಧ್ರುವ ನಕ್ಷತ್ರ'ದ ಚಿತ್ರೀಕರಣ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಹನೂರು ಪಟ್ಟಣದ ಮಹದೇಶ್ವರ ಕ್ರೀಡಾಂಗಣದಲ್ಲಿ ಚಿತ್ರತಂಡ ಸಂಪ್ರದಾಯದಂತೆ ಕುಂಬಳಕಾಯಿ ಒಡೆದು ಸಂಭ್ರಮಾಚರಣೆ ನಡೆಸಿತು.

ಸುಮಾರು 50 ದಿನಗಳ ಕಾಲ ಮೈಸೂರು, ಮದ್ದೂರು, ಹೊಸಕೋಟೆ, ಹನೂರು ಹಾಗೂ ಒಡೆಯರಪಾಳ್ಯ ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದ್ದು, ಈ ಚಿತ್ರದಲ್ಲಿ ಸ್ಥಳೀಯ ಪ್ರತಿಭೆಗಳಿಗೂ ಅವಕಾಶ ಕಲ್ಪಿಸಿರುವುದು ವಿಶೇಷವಾಗಿದೆ. ಈ ಸಂದರ್ಭದಲ್ಲಿ ನಿರ್ದೇಶಿಸಿರುವ ಬಿ. ಕೃಷ್ಣ ಮಳವಳ್ಳಿ, ಧ್ರುವ ನಕ್ಷತ್ರ' ಹಳ್ಳಿ ಸೊಗಡಿನ ಪ್ರೇಮಕಥೆ ಹೊಂದಿರುವ ಕುಟುಂಬ ಸಮೇತ ವೀಕ್ಷಿಸಬಹುದಾದ ಚಿತ್ರವಾಗಿದೆ. ಚಿತ್ರೀಕರಣ ಪೂರ್ಣಗೊಂಡಿದ್ದು, ಸದ್ಯದಲ್ಲೇ ಡಬ್ಬಿಂಗ್ ಕಾರ್ಯ ಆರಂಭಿಸಿ ಚಿತ್ರವನ್ನು ಪ್ರೇಕ್ಷಕರ ಮುಂದೆ ತರಲು ಸಿದ್ಧತೆ ನಡೆದಿದೆ. ಕನ್ನಡ ಸಿನಿ ಪ್ರೇಕ್ಷಕರು ಕನ್ನಡ ಚಿತ್ರಗಳನ್ನು ಚಿತ್ರಮಂದಿರದಲ್ಲೇ ವೀಕ್ಷಿಸಿ ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು.

---

ಆಗಸ್ಟ್ ಮೊದಲ ವಾರಕ್ಕೆ ಪರ್ಯಾಯ ಬೆಳೆ ನಿರ್ವಹಣಾ ಕ್ರಮ ಪ್ರಕಟ

## ಬರದ ಸಂಕಷ್ಟದಲ್ಲಿ ರೈತರಿಗೆ ಕೃಷಿ ಇಲಾಖೆ ಸಲಹೆ




**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಉಂಟಾಗಿರುವ ಬರದ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ರೈತರು ಅನುಸರಿಸಬೇಕಾದ ಆಗಸ್ಟ್ ಮೊದಲ ವಾರದ ಪರ್ಯಾಯ ಬೆಳೆ ನಿರ್ವಹಣಾ ಕ್ರಮಗಳನ್ನು ಕೃಷಿ ಇಲಾಖೆ ಪ್ರಕಟಿಸಿದೆ.

**ಹೆಸರು ಬೆಳೆಗೆ ವಿಶೇಷ ಕಾಳಜಿ**

ಹೆಸರು ಬೆಳೆಯಲ್ಲಿ ತೇವಾಂಶದ ಕೊರತೆಯನ್ನು ನೀಗಿಸಲು ಬಿತ್ತನೆಯಾದ 30 ಹಾಗೂ 45ನೇ ದಿನಗಳಲ್ಲಿ ಶೇ.1ರ 19:19:19 ಅಥವಾ ಪೊಟ್ಯಾಸಿಯಂ ನೈಟ್ರೇಟ್ ನೀರಿನಲ್ಲಿ ಕರಗುವ ಗೊಬ್ಬರವನ್ನು ಎಲೆಗಳ ಮೇಲೆ ಸಿಂಪಡಿಸಬೇಕು. ಹೂ ಬಿಡುವ ಹಾಗೂ ಕಾಳು ಕಟ್ಟುವ ಹಂತದಲ್ಲಿ ಪ್ರತಿ ಲೀಟರ್ ನೀರಿಗೆ 7-8 ಗ್ರಾಂ ಪಲ್ಸ್ ಬೂಸ್ಟರ್ ಅಥವಾ ಪಲ್ಸ್ ಮ್ಯಾಜಿಕ್ ಬೆರೆಸಿ ಸಿಂಪಡಿಸಿದರೆ ಉತ್ತಮ. ಸಾಧ್ಯವಾದರೆ ಒಂದು ಜೀವರಕ್ಷಕ ನೀರಾವರಿ ಒದಗಿಸಬೇಕು.

**ಗೋವಿನ ಜೋಳಕ್ಕೆ ಮೇಲುಗೊಬ್ಬರ, ಕೀಟ ನಿಯಂತ್ರಣಕ್ಕೆ ಒತ್ತು**

ಗೋವಿನ ಜೋಳದಲ್ಲಿ ಮಣ್ಣಿನಲ್ಲಿ ತೇವಾಂಶ ವಿದ್ದರೆ ಪ್ರತಿ ಎಕರೆಗೆ 44 ಕೆ.ಜಿ. ಯೂರಿಯಾವನ್ನು ಎರಡು ಹಂತಗಳಲ್ಲಿ ಮೇಲುಗೊಬ್ಬರವಾಗಿ ನೀಡಬೇಕು. ತೇವಾಂಶ ಕೊರತೆಯಿದ್ದರೆ 19:19:19 ಅಥವಾ ಪೊಟ್ಯಾಸಿಯಂ ನೈಟ್ರೇಟ್ ದ್ರಾವಣವನ್ನು ಸಿಂಪಡಿಸಬೇಕು. ಪ್ರತಿ ಎಕರೆಗೆ 200 ಲೀಟರ್ ಜೀವಾಮೃತ ಬಳಸುವುದು ಹಾಗೂ ಜೀವರಕ್ಷಕ ನೀರಾವರಿ ನೀಡುವುದು ಸೂಕ್ತ.

ಸೈನಿಕ ಹುಳು ಹಾಗೂ ಲದ್ದಿ ಹುಳುವಿನ ಬಾಧೆ ಕಂಡುಬಂದರೆ ಎಮಾಮೆಕ್ಟಿನ್ ಬೆಂಜೋಯೇಟ್ ಅಥವಾ ಕ್ಲೋರಂಟ್ರಾನಿಲಿಪ್ರೋಲ್ ಔಷಧವನ್ನು ಸಂಜೆ ವೇಳೆಯಲ್ಲಿ ಸಿಂಪಡಿಸುವಂತೆ ಸಲಹೆ ನೀಡಲಾಗಿದೆ.

**ಶೇಂಗಾ ಬೆಳೆಗೆ ಜಿಪ್ಸಮ್ ಮತ್ತು ಎಲೆ ಸಿಂಪರಣೆ**

ಶೇಂಗಾ ಬೆಳೆಯಲ್ಲಿ ಮಣ್ಣಿನ ತೇವಾಂಶ ಕಾಪಾಡಲು ಅಂತರ ಬೇಸಾಯ ಮಾಡಬೇಕು. ಬಿತ್ತನೆಯಾದ 35ರಿಂದ 40 ದಿನಗಳಲ್ಲಿ ಪ್ರತಿ ಎಕರೆಗೆ 200 ಕೆ.ಜಿ. ಜಿಪ್ಸಮ್ ಹಾಕಿ ಮಣ್ಣಿನಲ್ಲಿ ಬೆರೆಸಬೇಕು. ತೇವಾಂಶದ ಕೊರತೆಯಿದ್ದರೆ ಶೇ.2ರ ಯೂರಿಯಾ ಅಥವಾ ಶೇ.1ರ ಪೊಟ್ಯಾಸಿಯಂ ನೈಟ್ರೇಟ್ ದ್ರಾವಣವನ್ನು ಸಿಂಪಡಿಸುವುದರ ಜೊತೆಗೆ ಜೀವಾಮೃತ ಬಳಸಬೇಕು.

**ಬಿತ್ತನೆಯಾಗದ ಜಮೀನಿಗೆ ಪರ್ಯಾಯ ಸಲಹೆ**

ಇನ್ನೂ ಬಿತ್ತನೆಯಾಗದ ಜಮೀನಿನಲ್ಲಿ ಆಗಸ್ಟ್‌ನಲ್ಲಿ ಮಳೆಯಾದರೆ ಕಡಿಮೆ ಅವಧಿಯ ಹಾಗೂ ಬರನಿರೋಧಕ ಬೆಳೆಗಳಾದ ಸಜ್ಜೆ (ವಿಪಿಎಂವಿ-9) ಮತ್ತು ನವಣೆ (ಎಚ್‌ಎನ್-46) ಬಿತ್ತನೆ ಮಾಡಬಹುದು. ಇಲ್ಲವೇ ಚೌಕ ಮಡಿಗಳು ಅಥವಾ ಬೋದು-ಹರಿ ಸಾಲುಗಳನ್ನು ನಿರ್ಮಿಸಿ ಮಳೆ ನೀರನ್ನು ಜಮೀನಿನಲ್ಲೇ ಹಿಂಗಿಸಿ ಹಿಂಗಾರು ಬೆಳೆಗಳಿಗೆ ತೇವಾಂಶ ಸಂರಕ್ಷಿಸಬಹುದು ಎಂದು ಕೃಷಿ ಇಲಾಖೆ ತಿಳಿಸಿದೆ.

**ಮಳೆ ಕೊರತೆಯ ಹಿನ್ನೆಲೆಯಲ್ಲಿ ರೈತರು ಬೆಳೆ ನಿರ್ವಹಣಾ ಕ್ರಮಗಳನ್ನು ತಪ್ಪದೇ ಅನುಸರಿಸಿದರೆ ಬೆಳೆ ನಷ್ಟವನ್ನು ಗಣನೀಯವಾಗಿ ತಗ್ಗಿಸಬಹುದು.**

**- ಚೇತನಾ ಪಾಟೀಲ,**
ಜಂಟಿ ಕೃಷಿ ನಿರ್ದೇಶಕಿ, ಗದಗ ಜಿಲ್ಲೆ

## ಸಂಕ್ಷಿಪ್ತ ಸುದ್ದಿಗಳು

### ಸುಸ್ಥಿರ ಅಭಿವೃದ್ಧಿಯಲ್ಲಿ ಸಾಮಾಜಿಕ, ಆರ್ಥಿಕ ಹಾಗೂ ಪರಿಸರ ಕ್ಷೇತ್ರಗಳಲ್ಲಿ ಐತಿಹಾಸಿಕ ಸಾಧನೆ: ಎ.ಎ. ಕಂಬಾಳಿಮಠ

# 2030 ಗುರಿ ಸಾಕಾರಕ್ಕೆ ಭಾರತ ಸಜ್ಜು

**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತವು ಸುಸ್ಥಿರ ಅಭಿವೃದ್ಧಿ ಗುರಿಗಳ ಅನುಷ್ಠಾನದಲ್ಲಿ ಸಾಮಾಜಿಕ, ಆರ್ಥಿಕ ಹಾಗೂ ಪರಿಸರ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿದ್ದು, 2030ರ ಗುರಿ ತಲುಪುವ ವಿಶ್ವಾಸ ಮೂಡಿಸಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ ಹೇಳಿದರು.ಗದಗ ಜಿಲ್ಲಾ ತರಬೇತಿ ಸಂಸ್ಥೆಯಲ್ಲಿ ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾಡಳಿತ ವ್ಯಾಪ್ತಿಯ ವಿವಿಧ ಇಲಾಖೆಗಳ 'ಸಿ' ವೃಂದದ ಅಧಿಕಾರಿಗಳು ಮತ್ತು ಸಿಬ್ಬಂದಿಗಾಗಿ ಆಯೋಜಿಸಿದ್ದ ಎರಡು ದಿನಗಳ ಸುಸ್ಥಿರ ಅಭಿವೃದ್ಧಿ ಗುರಿಗಳ ಪರಿಚಯಾತ್ಮಕ ತರಬೇತಿ ಕಾರ್ಯಾಗಾರದ ಸಮಾರೋಪದಲ್ಲಿ ಅವರು ಮಾತನಾಡಿದರು.

ಭಾರತದಲ್ಲಿ 24.8 ಕೋಟಿ ಜನರು ಬಹುಮಟ್ಟದ ಬಡತನದಿಂದ ಹೊರಬಂದಿರುವುದು, ಮಹತ್ವಾಕಾಂಕ್ಷಿ ಜಿಲ್ಲೆಗಳ ಅಭಿವೃದ್ಧಿ ಕಾರ್ಯಕ್ರಮ, ಉಚಿತ ಆಹಾರ ಧಾನ್ಯ ವಿತರಣೆ, ಪೋಷಣ ಅಭಿಯಾನ, ಆಯುಷ್ಮಾನ್ ಭಾರತ್ ಆರೋಗ್ಯ ಯೋಜನೆ ಹಾಗೂ ಗ್ರಾಮೀಣ ಭಾಗದಲ್ಲಿ ತಾಯಿ-ಮಗು ಆರೋಗ್ಯ ಸೇವೆಗಳ ವಿಸ್ತರಣೆಯಂತಹ ಕ್ರಮಗಳು ಸುಸ್ಥಿರ ಅಭಿವೃದ್ಧಿಯ ಮಹತ್ವದ ಮೈಲಿಗಲ್ಲುಗಳಾಗಿವೆ ಎಂದು ತಿಳಿಸಿದರು.

**ಸಮಾನತೆ ಮತ್ತು ಹಸಿರು ಭವಿಷ್ಯದತ್ತ ಭಾರತ ಮುನ್ನಡೆ:** ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತರಬೇತಿ ಸಂಸ್ಥೆಯ ಪ್ರಾಚಾರ್ಯೆ ಜಯದೇವಿ ಅಡಕೇರಿಮಠ ಮಾತನಾಡಿ, ಶುದ್ಧ ಇಂಧನ, ಡಿಜಿಟಲ್ ಮೂಲಸೌಕರ್ಯ, ಪರಿಸರ ಸಂರಕ್ಷಣೆ ಹಾಗೂ ಸಾಮಾಜಿಕ ಸಮಾನತೆಯ ಮೂಲಕ ಭಾರತ ಸಮಗ್ರ ಅಭಿವೃದ್ಧಿಯತ್ತ ಸಾಗುತ್ತಿದೆ. ಸುಸ್ಥಿರ ಅಭಿವೃದ್ಧಿ ಗುರಿಗಳು ದೇಶದ ಹಸಿರು ಮತ್ತು ಸಮೃದ್ಧ ಭವಿಷ್ಯಕ್ಕೆ ಭದ್ರ ಅಡಿಪಾಯ ಹಾಕಿವೆ ಎಂದು ಹೇಳಿದರು.ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ ಮಾತನಾಡಿ, ರಾಷ್ಟ್ರೀಯ ಗ್ರೀನ್ ಹೈಡ್ರೋಜನ್ ಮಿಷನ್, ಪಿಎಂ-ಕುಸುಮ್ ಯೋಜನೆ, ಪಿಎಂ ಸೂರ್ಯ ಘರ್ ಉಚಿತ ವಿದ್ಯುತ್ ಯೋಜನೆ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಹಾಗೂ ಎಸ್‌ಡಿಜಿ ಇಂಡಿಯಾ ಇಂಡೆಕ್ಸ್ ಮೂಲಕ ದೇಶ ಅಭಿವೃದ್ಧಿಯ ಹೊಸ ದಿಕ್ಕಿನತ್ತ ಸಾಗುತ್ತಿದೆ ಎಂದು ವಿವರಿಸಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಬಿ. ಮಡ್ಲೂರ ಮಾತನಾಡಿ, ಸುಸ್ಥಿರ ಅಭಿವೃದ್ಧಿ ಗುರಿಗಳ ಕುರಿತು ಜನಜಾಗೃತಿ ಮೂಡಿಸುವಲ್ಲಿ ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.ಉಪಪ್ರಾಚಾರ್ಯ ಐ.ಜೆ. ಪಾಪಣ್ಣ ಮಾತನಾಡಿ, 2030ರೊಳಗೆ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಅಗತ್ಯ ವಾತಾವರಣ ಈಗಾಗಲೇ ನಿರ್ಮಾಣವಾಗಿದ್ದು, ಮುಂದಿನ ನಾಲ್ಕು ವರ್ಷಗಳಲ್ಲಿ ನಿರೀಕ್ಷಿತ ಸಾಧನೆ ಸಾಧ್ಯವಾಗುವ ವಿಶ್ವಾಸವಿದೆ ಎಂದು ತಿಳಿಸಿದರು.

ಮೈಸೂರು ಆಡಳಿತ ತರಬೇತಿ ಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳ ಕರ್ನಾಟಕ ಕೇಂದ್ರದ ಸಂಯೋಜಕ ಡಾ. ಸಿದ್ದರಾಮ ಎಚ್.ಎಂ. ವಿಶೇಷ ಉಪನ್ಯಾಸ ನೀಡಿದರು. ತರಬೇತಿ ಸಂಸ್ಥೆಯ ಬೋಧಕರಾದ ಎಸ್.ಎಂ. ಸುಣಗಾರ, ಆರ್.ಎಂ. ಹರಿಜನ, ಮಂಜುನಾಥ ಪತ್ತಾರ, ಶಂಕರ ಬಿರಾದಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

> **ಸುಸ್ಥಿರ ಅಭಿವೃದ್ಧಿ ಗುರಿಗಳ ಅನುಷ್ಠಾನದಲ್ಲಿ ಭಾರತ ಸಾಧಿಸಿರುವ ಪ್ರಗತಿ ವಿಶ್ವದ ಗಮನ ಸೆಳೆದಿದ್ದು, 2030ರ ಗುರಿ ತಲುಪುವ ವಿಶ್ವಾಸ ಮತ್ತಷ್ಟು ಬಲಗೊಂಡಿದೆ.**
>
> – **ಎ.ಎ. ಕಂಬಾಳಿಮಠ,** ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ಗದಗ

### ಶೋಷಿತರ ಪರ ಹೋರಾಟ ತೀವ್ರಗೊಳಿಸಲು ರಾಜ್ಯಾಧ್ಯಕ್ಷ ಶಂಕರ ಮುಗಳಿ ಕರೆ

# ಭೀಮ್ ಶಕ್ತಿ ಜಿಲ್ಲಾ ಘಟಕಕ್ಕೆ ನೂತನ ಪದಾಧಿಕಾರಿಗಳ ನೇಮಕ

**ವಿಜಯಸಾಕ್ಷಿ ಸುದ್ದಿ, ಗದಗ**

ಭೀಮ್ ಶಕ್ತಿ ಸಂಘಟನೆಯ ಗದಗ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳ ಆಯ್ಕೆ ಸಭೆ ನಗರದ ಪ್ರವಾಸಿ ಮಂದಿರದಲ್ಲಿ ರಾಜ್ಯಾಧ್ಯಕ್ಷ ಶಂಕರ ಮುಗಳಿ ಅವರ ಅಧ್ಯಕ್ಷತೆಯಲ್ಲಿ ಹಾಗೂ ರಾಜ್ಯ ಕಾನೂನು ಸಲಹೆಗಾರ ಮೈಲಾರಪ್ಪ ಡಿ.ಎಚ್. ಅವರ ನೇತೃತ್ವದಲ್ಲಿ ನಡೆಯಿತು. ಸಭೆಯನ್ನುದ್ದೇಶಿಸಿ ಮಾತನಾಡಿದ ಶಂಕರ ಮುಗಳಿ, ಭೀಮ್ ಶಕ್ತಿ ಸಂಘಟನೆಯನ್ನು ಗ್ರಾಮ ಮಟ್ಟದವರೆಗೆ ಬಲಿಷ್ಠಗೊಳಿಸುವ ಉದ್ದೇಶದಿಂದ ಗದಗ ಜಿಲ್ಲಾ ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಸಂಘಟನೆಯ ಎಲ್ಲ ಪದಾಧಿಕಾರಿಗಳು ಸಮಾಜದ ಕೆಳವರ್ಗದ ಜನರ ಧ್ವನಿಯಾಗಿ ಕಾರ್ಯನಿರ್ವಹಿಸಿ, ಜನಸೇವೆ ಹಾಗೂ ಹೋರಾಟದ ಮೂಲಕ ಸಂಘಟನೆಯನ್ನು ಮತ್ತಷ್ಟು ಸದೃಢಗೊಳಿಸಬೇಕು ಎಂದು ಕರೆ ನೀಡಿದರು.

ರಾಜ್ಯ ಕಾನೂನು ಸಲಹೆಗಾರ ಮೈಲಾರಪ್ಪ ಡಿ.ಎಚ್. ಮಾತನಾಡಿ, ದಲಿತರು, ರೈತರು, ವಿದ್ಯಾರ್ಥಿಗಳು ಹಾಗೂ ಶೋಷಿತ ಸಮುದಾಯದವರ ಪರ ನಿರಂತರ ಹೋರಾಟ ನಡೆಸಬೇಕು. ಕನ್ನಡ ನಾಡು, ನುಡಿ, ನೆಲ ಹಾಗೂ ಜಲದ ರಕ್ಷಣೆಯ ಜೊತೆಗೆ ಸಾಮಾಜಿಕ ನ್ಯಾಯಕ್ಕಾಗಿ ಸಂಘಟನೆ ಸಕ್ರಿಯ ಪಾತ್ರವಹಿಸಬೇಕು ಎಂದು ಹೇಳಿದರು. ರಾಷ್ಟ್ರಕವಿ ಕುವೆಂಪು ಅವರ ಭತ್ತ ಬೆಳೆಯುವ ಗದ್ದೆಗಳಾಗಬೇಕೇ ಹೊರತು ಭತ್ತ ತುಂಬುವ ಚೀಲಗಳಾಗಬಾರದು ಎಂಬ ಮಾತನ್ನು ಉಲ್ಲೇಖಿಸಿದ ಅವರು, ಪದಾಧಿಕಾರಿಗಳು ಜಾಗೃತಿಯಿಂದ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಬೇಕು ಎಂದು ಸಲಹೆ ನೀಡಿದರು.

ಜಿಲ್ಲಾಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಅಣ್ಣಪ್ಪ ಗುತ್ತೆಮ್ಮನವರ ಮಾತನಾಡಿ, ಶಿಕ್ಷಣವೇ ಬದುಕಿನ ಅಡಿಪಾಯವಾಗಿದ್ದು, ಪೆನ್ನು ಮತ್ತು ಪುಸ್ತಕಗಳು ಸಮಾಜವನ್ನು ಬದಲಾಯಿಸುವ ಶಕ್ತಿ ಹೊಂದಿವೆ. ನೊಂದವರು, ಅನ್ಯಾಯಕ್ಕೊಳಗಾದವರು, ರೈತರು, ವಿದ್ಯಾರ್ಥಿಗಳು ಹಾಗೂ ದಲಿತರ ಪರ ಸಂಘಟನೆ ಪ್ರಾಮಾಣಿಕವಾಗಿ ಹೋರಾಟ ನಡೆಸಲಿದೆ ಎಂದು ಭರವಸೆ ನೀಡಿದರು.

ಸಭೆಯಲ್ಲಿ ಅಣ್ಣಪ್ಪ ಗುತ್ತೆಮ್ಮನವರ ಅವರನ್ನು ಜಿಲ್ಲಾಧ್ಯಕ್ಷರನ್ನಾಗಿ, ಮುತ್ತಪ್ಪ ಮ್ಯಾಗೇರಿ ಅವರನ್ನು ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ, ಮರಿಯಪ್ಪ ಪೂಜಾರ ಅವರನ್ನು ಗೌರವಾಧ್ಯಕ್ಷರಾಗಿ, ಸಿದ್ದಪ್ಪ ಮಾದರ (ಅನಿಲ್) ಅವರನ್ನು ಜಿಲ್ಲಾ ಯುವ ಘಟಕದ ಅಧ್ಯಕ್ಷರಾಗಿ, ಮುತ್ತಪ್ಪ ಪೂಜಾರ ಅವರನ್ನು ಸಂಘಟನಾ ಕಾರ್ಯದರ್ಶಿಯಾಗಿ, ಕೃಷ್ಣಪ್ಪ ಮರಾಠಿ ಅವರನ್ನು ಜಿಲ್ಲಾ ಯುವ ಘಟಕದ ಉಪಾಧ್ಯಕ್ಷರಾಗಿ, ಯಮನಪ್ಪ ಪೂಜಾರ ಅವರನ್ನು ಜಿಲ್ಲಾ ಯುವ ಘಟಕದ ಕಾರ್ಯದರ್ಶಿಯಾಗಿ ಹಾಗೂ ಕೋಟೆಪ್ಪ ಪೂಜಾರ ಅವರನ್ನು ಶಿರಹಟ್ಟಿ ತಾಲೂಕು ಅಧ್ಯಕ್ಷರಾಗಿ ನೇಮಕ ಮಾಡಿ ಅಧಿಕಾರ ಪತ್ರಗಳನ್ನು ವಿತರಿಸಲಾಯಿತು.

ಅಲ್ಲದೆ ಸಂಘಟನೆಯ ವಿವಿಧ ಘಟಕಗಳಿಗೆ ಇನ್ನೂ ಹಲವು ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ಸಭೆಯಲ್ಲಿ ಸಂಘಟನೆಯನ್ನು ತಾಲೂಕು ಹಾಗೂ ಗ್ರಾಮ ಮಟ್ಟದಲ್ಲಿ ವಿಸ್ತರಿಸುವುದು, ರೈತರು, ಬಡವರು, ವಿದ್ಯಾರ್ಥಿಗಳು, ದಲಿತರ ಹಕ್ಕುಗಳ ರಕ್ಷಣೆ ಹಾಗೂ ಕನ್ನಡ ನಾಡು-ನುಡಿ, ನೆಲ ಮತ್ತು ಜಲ ಸಂರಕ್ಷಣೆಗೆ ಸಂಬಂಧಿಸಿದ ಹೋರಾಟಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ರೂಪಿಸುವ ಕುರಿತು ಚರ್ಚೆ ನಡೆಯಿತು. ಸಭೆಯಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಮುಖಂಡರು, ಕಾರ್ಯಕರ್ತರು ಮತ್ತು ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು. ಕೊನೆಯಲ್ಲಿ ರಾಜ್ಯಾಧ್ಯಕ್ಷ ಶಂಕರ ಮುಗಳಿ ಅವರು ನೂತನ ಪದಾಧಿಕಾರಿಗಳನ್ನು ಅಭಿನಂದಿಸಿ ಶುಭ ಹಾರೈಸಿದರು.

### ಶಿಕ್ಷಣವೇ ಮೊದಲ ಆದ್ಯತೆ... ಪ್ರೀತಿ-ಮದುವೆ ನಂತರದ ನಿರ್ಧಾರವಾಗಲಿ: ಡಾ. ನಾಗಲಕ್ಷ್ಮಿ ಚೌಧರಿ

# ಮೊದಲು ಶಿಕ್ಷಣ... ನಂತರ ಜೀವನದ ನಿರ್ಧಾರ!



**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿನಿಯರು ಮೊದಲು ಶಿಕ್ಷಣ ಪೂರ್ಣಗೊಳಿಸಿ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು. ತಮ್ಮ ಕಾಲ ಮೇಲೆ ತಾವು ನಿಲ್ಲುವವರೆಗೆ ಪ್ರೀತಿ, ಪ್ರಣಯ ಅಥವಾ ಮದುವೆಯಂತಹ ನಿರ್ಧಾರಗಳಿಗೆ ಮುಂದಾಗದೆ ಭವಿಷ್ಯ ಮತ್ತು ಗುರಿ ಸಾಧನೆಗೆ ಆದ್ಯತೆ ನೀಡಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಸರ್ಕಾರಿ ನೌಕರರ ಸಂಘ ಹಾಗೂ ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ವಿದ್ಯಾರ್ಥಿ-ವಿದ್ಯಾರ್ಥಿನಿಯರೊಂದಿಗೆ ಸಂವಾದ ಹಾಗೂ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವಯೋಸಹಜವಾಗಿ ಉಂಟಾಗುವ ಆಕರ್ಷಣೆಗೆ ಮರುಳಾಗಿ ಮನೆ ಬಿಟ್ಟು ಹೋಗುವಂತಹ ನಿರ್ಧಾರಗಳು ಇಡೀ ಜೀವನದ ಮೇಲೆ ದುಷ್ಪರಿಣಾಮ ಬೀರುತ್ತವೆ. ಆದ್ದರಿಂದ ವಿದ್ಯಾರ್ಥಿಗಳು ತಮ್ಮ ಶಿಕ್ಷಣ, ಗುರಿ ಮತ್ತು ವೃತ್ತಿ ಬದುಕಿನತ್ತ ಗಮನಹರಿಸಬೇಕು ಎಂದು ಕಿವಿಮಾತು ಹೇಳಿದರು. ಪ್ರತಿಯೊಬ್ಬ ಪೋಷಕರ ಕನಸು ತಮ್ಮ ಮಗಳು ಸ್ವಾವಲಂಬಿಯಾಗಿ ಯಾರ ಮುಂದೆಯೂ ಕೈಚಾಚದಂತಾಗಬೇಕು ಎಂಬುದಾಗಿದೆ.

ಆ ಕನಸನ್ನು ನನಸು ಮಾಡಲು ಹೆಣ್ಣುಮಕ್ಕಳು ವಿದ್ಯಾಭ್ಯಾಸದೊಂದಿಗೆ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಸಾಮಾಜಿಕ ಜಾಲತಾಣಗಳ ಬಳಕೆಯಲ್ಲಿ ವಿದ್ಯಾರ್ಥಿನಿಯರು ಎಚ್ಚರಿಕೆ ವಹಿಸಬೇಕು. ತಮ್ಮ ಪ್ರೊಫೈಲ್‌ಗಳನ್ನು ಖಾಸಗಿಯಾಗಿ ಇಟ್ಟುಕೊಂಡು ಅಪರಿಚಿತರ ಸ್ನೇಹ ವಿನಂತಿಗಳನ್ನು ಸ್ವೀಕರಿಸಬಾರದು. ನಕಲಿ ಪ್ರೀತಿ, ಡೇಟಿಂಗ್ ಆ್ಯಪ್‌ಗಳು ಹಾಗೂ ಮಾನವ ಕಳ್ಳಸಾಗಣೆ ಜಾಲಗಳ ಬಗ್ಗೆ ಜಾಗೃತರಾಗಿರಬೇಕು ಎಂದು ಎಚ್ಚರಿಕೆ ನೀಡಿದರು. ಮೊಬೈಲ್ ಬಳಕೆಯನ್ನು ಮಿತಿಗೊಳಿಸಿ ಪ್ರತಿದಿನ ಕನಿಷ್ಠ ನಾಲ್ಕರಿಂದ ಆರು ಗಂಟೆಗಳ ಕಾಲ ಅಧ್ಯಯನಕ್ಕೆ ಮೀಸಲಿಡಬೇಕು. ಶ್ರಮ, ಶಿಸ್ತು ಹಾಗೂ ಗುರಿಯೊಂದಿಗೆ ಮುನ್ನಡೆದರೆ ಐಎಎಸ್, ಐಪಿಎಸ್, ನ್ಯಾಯಾಧೀಶರು, ವಕೀಲರು ಸೇರಿದಂತೆ ಯಾವುದೇ ಕ್ಷೇತ್ರದಲ್ಲಿ ಸಾಧನೆ ಸಾಧ್ಯ ಎಂದು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ತುಂಬಿದರು.

ಮಹಿಳೆಯರಿಗೆ ಗೌರವ ನೀಡುವ ಸಂಸ್ಕೃತಿ ಮನೆಯಲ್ಲಿಯೇ ಆರಂಭವಾಗಬೇಕು. ಯತ್ರ ನಾರ್ಯಸ್ತು ಪೂಜ್ಯಂತೆ ಎಂಬ ಮಾತು ಕೇವಲ ಪಠ್ಯಕ್ಕೆ ಸೀಮಿತವಾಗದೆ ಜೀವನದಲ್ಲಿ ಅಳವಡಿಕೆಯಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಕಾರ್ಯದರ್ಶಿ ರೂಪಾ ಆರ್., ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಎಂ. ಗಂಗಪ್ಪ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣ್ಣಬರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಸವರಾಜ ವಿ. ಬಳ್ಳಾರಿ, ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ ಎಸ್.ಎನ್. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಬಸವರಾಜ ಈರಣ್ಣನವರ್ ಅವರ ತಂಡ ನಾಡಗೀತೆ ಹಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ರಾಧಾ ಮಣ್ಣೂರು ಸ್ವಾಗತಿಸಿದರು. ಎಸ್.ಎಸ್. ಗೌಡರ್ ಕಾರ್ಯಕ್ರಮ ನಿರೂಪಿಸಿದರು.

> **ಶಿಕ್ಷಣ ಮತ್ತು ಸ್ವಾವಲಂಬನೆಯೇ ವಿದ್ಯಾರ್ಥಿನಿಯರ ಮೊದಲ ಗುರಿಯಾಗಬೇಕು. ತಮ್ಮ ಕಾಲ ಮೇಲೆ ತಾವು ನಿಲ್ಲುವವರೆಗೆ ಪ್ರೀತಿ ಅಥವಾ ಮದುವೆಯಂತಹ ನಿರ್ಧಾರಗಳಿಗೆ ಮುಂದಾಗಬಾರದು.**
>
> – **ಡಾ. ನಾಗಲಕ್ಷ್ಮಿ ಚೌಧರಿ,** ಅಧ್ಯಕ್ಷೆ, ಕರ್ನಾಟಕ ರಾಜ್ಯ ಮಹಿಳಾ ಆಯೋಗ

### ದುಶ್ಚಟಗಳಿಂದ ದೂರವಿದ್ದು ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡುವಂತೆ ಪಿಎಸ್‌ಐ ಕಿವಿಮಾತು

# ವಿದ್ಯಾರ್ಥಿ ಜೀವನವೇ ಭವಿಷ್ಯದ ಭದ್ರ ಬುನಾದಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪದವಿ ಪೂರ್ವ ಶಿಕ್ಷಣವು ವಿದ್ಯಾರ್ಥಿಗಳ ಬದುಕಿನ ನಿರ್ಣಾಯಕ ಘಟ್ಟವಾಗಿದ್ದು, ಈ ಹಂತದಲ್ಲಿ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಆದ್ಯತೆ ನೀಡಿ ಆತ್ಮವಿಶ್ವಾಸ, ಶಿಸ್ತು ಮತ್ತು ಗುರಿಯೊಂದಿಗೆ ಮುನ್ನಡೆದರೆ ಯಶಸ್ಸು ಖಚಿತ ಎಂದು ಪಿಎಸ್‌ಐ ನಾಗರಾಜ ಗಡಾದ ಹೇಳಿದರು. ಪಟ್ಟಣದ ಪುರಸಭೆ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಶನಿವಾರ 2026-27ನೇ ಸಾಲಿನ ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ತಂದೆ-ತಾಯಿಗಳು ಮಕ್ಕಳ ಭವಿಷ್ಯಕ್ಕಾಗಿ ಅಪಾರ ತ್ಯಾಗ ಮಾಡುತ್ತಾರೆ. ಅವರ ಕನಸನ್ನು ನನಸು ಮಾಡುವ ಜವಾಬ್ದಾರಿ ವಿದ್ಯಾರ್ಥಿಗಳ ಮೇಲಿದೆ. ಯಾವುದೇ ದುಶ್ಚಟಗಳಿಗೆ ಬಲಿಯಾಗದೆ, ಮೊಬೈಲ್ ಬಳಕೆಯನ್ನು ಮಿತಿಗೊಳಿಸಿ, ಶಿಸ್ತು, ಸಂಯಮ ಮತ್ತು ಸನ್ನಡತೆಯೊಂದಿಗೆ ಬದುಕಿದರೆ ಅದೇ ಪಾಲಕರಿಗೆ ಹಾಗೂ ಸಮಾಜಕ್ಕೆ ನೀಡುವ ಅತ್ಯುತ್ತಮ ಕೊಡುಗೆಯಾಗುತ್ತದೆ ಎಂದು ಹೇಳಿದರು. ಕಾಲೇಜಿನಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ, ಸಾಧನೆಯ ಗುರಿಯೊಂದಿಗೆ ಮುನ್ನಡೆಯಬೇಕು. ಸವಾಲುಗಳನ್ನು ಧೈರ್ಯದಿಂದ ಎದುರಿಸಿ ಉತ್ತಮ ಭವಿಷ್ಯ ರೂಪಿಸಿಕೊಳ್ಳುವ ಮನೋಭಾವ ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿರಬೇಕು ಎಂದು ಕಿವಿಮಾತು ಹೇಳಿದರು.

ಪ್ರಾಚಾರ್ಯ ಎ.ವೈ. ಕಳ್ಳಿಮನಿ ಮಾತನಾಡಿ, ಪುರಸಭೆ ಪದವಿ ಪೂರ್ವ ಮಹಾವಿದ್ಯಾಲಯವು ಸುಮಾರು 76 ವರ್ಷಗಳ ಸುದೀರ್ಘ ಇತಿಹಾಸ ಹೊಂದಿದ್ದು, ಇಲ್ಲಿಂದ ವಿದ್ಯಾಭ್ಯಾಸ ಮಾಡಿದ ಅನೇಕ ವಿದ್ಯಾರ್ಥಿಗಳು ದೇಶ-ವಿದೇಶಗಳಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಕಾಲೇಜಿನ ಶೈಕ್ಷಣಿಕ ಹಾಗೂ ಪಠ್ಯೇತರ ಚಟುವಟಿಕೆಗಳು ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ಪೂರಕವಾಗಿದ್ದು, ಮುಂದೆಯೂ ಇನ್ನಷ್ಟು ಪ್ರತಿಭಾವಂತ ವಿದ್ಯಾರ್ಥಿಗಳು ರೂಪುಗೊಳ್ಳುವ ವಿಶ್ವಾಸ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ನೀಲಪ್ಪ ಗೊರವರ, ಯಶವಂತ ಸೂರಣಗಿ ಹಾಗೂ ಅನ್ನಪೂರ್ಣ ದುರ್ಗಣ್ಣವರ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಎಸ್.ಜಿ. ಹುಳಕನವರ, ಮಂಜುನಾಥ ಬೂದಿಹಾಳ, ಎಚ್.ಎಲ್. ಕೋರಿ, ಎಂ.ಎಲ್. ಬೋದ್ಲೆಖಾನ್, ಎಫ್.ಎಂ. ಚಕಾರದ, ಪಿ.ಡಿ. ದೇಶಪಾಂಡೆ, ಎಫ್.ಜಿ. ಕರೆಪ್ಪಗೌಡ್ರ, ಜಿ.ಪಿ. ಹಿರೇಮಠ, ಐ.ಎಂ. ಸಂಗಟಾ ಣೂರ, ಡಿ.ಎಂ. ಪೂಜಾರ, ಬಿ.ಜೆ. ಪಾಟೀಲ, ಎಂ.ಆರ್. ಬನ್ನಿಕೊಪ್ಪ ಸೇರಿದಂತೆ ಬೋಧಕ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿನಿಯರಾದ ನಾಗವೇಣಿ ಶರಸೂರಿ, ನಾಗಲಕ್ಷ್ಮಿ ಪಾಟೀಲ ಹಾಗೂ ಪವಿತ್ರಾ ಕಿಳ್ಳಿಕ್ಯಾತರ ಕಾರ್ಯಕ್ರಮ ನಿರೂಪಿಸಿದರು.

> **ಮೊಬೈಲ್‌ಗೆ ಮಿತಿ ಹಾಕಿ, ಗುರಿಗೆ ಗತಿ ಕೊಡಿ. ಶಿಸ್ತು, ಸಂಯಮ ಮತ್ತು ಪರಿಶ್ರಮವೇ ಯಶಸ್ಸಿನ ನಿಜವಾದ ಸೂತ್ರ.**
>
> – **ನಾಗರಾಜ ಗಡಾದ,** ಪಿಎಸ್‌ಐ

# ವಲಸೆ ತಡೆಯಲು ವಿಬಿಜಿರಾಮ್ ಉದ್ಯೋಗದ ಭರವಸೆ




**ವಿಜಯಸಾಕ್ಷಿ ಸುದ್ದಿ, ನರಗುಂದ**

ಗ್ರಾಮೀಣ ಕೂಲಿಕಾರ್ಮಿಕರಿಗೆ ಸ್ಥಳೀಯ ಮಟ್ಟದಲ್ಲೇ ಉದ್ಯೋಗ ಕಲ್ಪಿಸಿ ವಲಸೆ ತಡೆಯುವ ಉದ್ದೇಶದಿಂದ ಜುಲೈ 1ರಿಂದ ಜಾರಿಗೆ ಬಂದಿರುವ ವ್ಹಿಬಿಜಿರಾಮ್ (ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ ಅಂಡ್ ಅಜೀವಿಕಾ ಮಿಷನ್) ಯೋಜನೆಯಡಿ ವರ್ಷಕ್ಕೆ 125 ದಿನಗಳ ಉದ್ಯೋಗ ನೀಡಲಾಗುವುದು ಎಂದು ನರಗುಂದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಯೋಜನೆ ಅನುಷ್ಠಾನಗೊಳ್ಳುತ್ತಿದ್ದು, ನಿರೀಕ್ಷಿತ ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳು ಕುಂಠಿತಗೊಂಡಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಕೂಲಿಕಾರ್ಮಿಕರು ವಲಸೆ ಹೋಗದಂತೆ ಸ್ಥಳೀಯವಾಗಿಯೇ ಉದ್ಯೋಗ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಉದ್ಯೋಗ ಬಯಸುವ ಕಾರ್ಮಿಕರು ತಮ್ಮ ಗ್ರಾಮ ಪಂಚಾಯಿತಿಗೆ ನಮೂನೆ6ರಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ 15 ದಿನಗಳೊಳಗೆ ಕೆಲಸ ನೀಡುವುದು ಗ್ರಾಮ ಪಂಚಾಯಿತಿಯ ಕರ್ತವ್ಯವಾಗಿದ್ದು, ನಿಗದಿತ ಅವಧಿಯಲ್ಲಿ ಕೆಲಸ ದೊರೆಯದಿದ್ದರೆ ನಿರುದ್ಯೋಗ ಭತ್ಯೆ ನೀಡಲು ಶಿಫಾರಸು ಮಾಡಲಾಗುವುದು ಎಂದು ತಿಳಿಸಿದ್ದಾರೆ. ಯೋಜನೆಯಡಿ ಕಾಲುವೆ ಸ್ವಚ್ಛತೆ, ಕೆರೆ ಅಭಿವೃದ್ಧಿ, ಸಸಿ ನೆಡುವುದು, ಚರಂಡಿ ನಿರ್ಮಾಣ, ರಸ್ತೆ ಅಭಿವೃದ್ಧಿ ಸೇರಿದಂತೆ 318 ಬಗೆಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬಹುದಾಗಿದೆ. ಪ್ರತಿ ಕೂಲಿಕಾರ್ಮಿಕರಿಗೆ ದಿನಕ್ಕೆ ₹382 ಕೂಲಿ ನೀಡಲಾಗುತ್ತಿದ್ದು, 125 ದಿನ ಕೆಲಸ ಮಾಡಿದರೆ ₹47,750 ಕೂಲಿ ದೊರೆಯಲಿದೆ ಎಂದು ಮಾಹಿತಿ ನೀಡಿದ್ದಾರೆ. ಈಗಾಗಲೇ ಇ-ಕೆವೈಸಿ ಪೂರ್ಣಗೊಳಿಸಿರುವ ಕಾರ್ಮಿಕರು ತಮ್ಮ ಕಾಯಕಬಂಧು (ಮೇಟ್) ಮೂಲಕ ಹೆಸರು ನೋಂದಾಯಿಸಿ ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಬೇಕು. ಹೊಸ ಗ್ರಾಮೀಣ ಉದ್ಯೋಗ ಕಾರ್ಡ್‌ಗಳು ವಿತರಿಸುವವರೆಗೆ ಹಳೆಯ ನರೇಗಾ ಜಾಬ್ ಕಾರ್ಡ್‌ಗಳೇ ಮಾನ್ಯವಾಗಿರಲಿದ್ದು, ಜಾಬ್ ಕಾರ್ಡ್ ಇಲ್ಲದ ಕುಟುಂಬಗಳು ಗ್ರಾಮ ಪಂಚಾಯಿತಿಯಲ್ಲಿ ಹೆಸರು ನೋಂದಾಯಿಸಿ ಹೊಸ ಕಾರ್ಡ್ ಪಡೆಯಬಹುದಾಗಿದೆ ಎಂದು ಶ್ರೀಧರ್ ಚಿನಗುಂಡಿ ತಿಳಿಸಿದ್ದಾರೆ.

# ಕೆಎಸ್‌ಆರ್‌ಟಿಸಿ ಸಿಬ್ಬಂದಿಯ ಕಣ್ಣಿನ ಆರೋಗ್ಯ ತಪಾಸಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಕೆಎಸ್‌ಆರ್‌ಟಿಸಿ ಚಾಲಕರು, ನಿರ್ವಾಹಕರು ಹಾಗೂ ಸಿಬ್ಬಂದಿಯ ಕಣ್ಣಿನ ಆರೋಗ್ಯ ಕಾಪಾಡುವ ಮೂಲಕ ಸುರಕ್ಷಿತ ರಸ್ತೆ ಸಂಚಾರಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಡಾ. ಮೆಹರವಾಡೆ ಕಣ್ಣಿನ ಆಸ್ಪತ್ರೆ ಹಾಗೂ ಮಾ. ಕುಷ್ಮಾಂಡಾ ಟ್ರಸ್ಟ್ ವತಿಯಿಂದ 'ಮಿಷನ್ ನೇತ್ರ ಯಾತ್ರೆ' ಅಭಿಯಾನವನ್ನು ಗದಗ ಜಿಲ್ಲೆಯಾದ್ಯಂತ ಯಶಸ್ವಿಯಾಗಿ ನಡೆಸಲಾಯಿತು.

ಅಭಿಯಾನದಡಿ ಜಿಲ್ಲೆಯ ಎಲ್ಲ ಕೆಎಸ್‌ಆರ್‌ಟಿಸಿ ಡಿಪೋಗಳಲ್ಲಿ ಉಚಿತ ಸಮಗ್ರ ನೇತ್ರ ತಪಾಸಣಾ ಶಿಬಿರಗಳನ್ನು ಆಯೋಜಿಸಿ ಚಾಲಕರು, ನಿರ್ವಾಹಕರು, ಮೆಕ್ಯಾನಿಕ್‌ಗಳು, ಆಡಳಿತ ಸಿಬ್ಬಂದಿ ಸೇರಿದಂತೆ ಡಿಪೋದಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಯ ಕಣ್ಣಿನ ಪರೀಕ್ಷೆ ನಡೆಸಲಾಯಿತು.

ದೀರ್ಘಕಾಲ ವಾಹನ ಚಾಲನೆ, ಧೂಳು, ಬಿಸಿಲು ಹಾಗೂ ನಿರಂತರ ಕೆಲಸದ ಒತ್ತಡದಿಂದ ಉಂಟಾಗುವ ದೃಷ್ಟಿ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲಿಯೇ ಪತ್ತೆಹಚ್ಚುವ ಉದ್ದೇಶದಿಂದ ಅನುಭವಿ ನೇತ್ರ ತಜ್ಞರು ಮತ್ತು ಆಪ್ಟೊಮೆಟ್ರಿಸ್ಟ್‌ಗಳು ಆಧುನಿಕ ಉಪಕರಣಗಳ ಮೂಲಕ ತಪಾಸಣೆ ನಡೆಸಿದರು. ಈ ವೇಳೆ ಹಲವರಲ್ಲಿ ದೃಷ್ಟಿದೋಷ, ಆರಂಭಿಕ ಹಂತದ ಮೋತಿಬಿಂದು, ಡ್ರೈ ಐ, ಅಲರ್ಜಿ ಹಾಗೂ ವಯೋಸಹಜ ಕಣ್ಣಿನ ಸಮಸ್ಯೆಗಳು ಪತ್ತೆಯಾಗಿದ್ದು, ಸೂಕ್ತ ಚಿಕಿತ್ಸೆ ಹಾಗೂ ವೈದ್ಯಕೀಯ ಸಲಹೆ ನೀಡಲಾಯಿತು. ದೃಷ್ಟಿದೋಷ ಹೊಂದಿದ್ದ ಸಿಬ್ಬಂದಿಗೆ ಅಗತ್ಯ ಪವರ್‌ನ ಕನ್ನಡಕಗಳನ್ನು ಉಚಿತವಾಗಿ ವಿತರಿಸಲಾಯಿತು.

ಕನ್ನಡಕ ಧರಿಸಿದ ಬಳಿಕ ರಸ್ತೆ ಸೂಚನಾ ಫಲಕಗಳನ್ನು ಸ್ಪಷ್ಟವಾಗಿ ಗುರುತಿಸಲು ಹಾಗೂ ಸುರಕ್ಷಿತವಾಗಿ ವಾಹನ ಚಾಲನೆ ಮಾಡಲು ಅನುಕೂಲವಾಗಿದೆ ಎಂದು ಸಿಬ್ಬಂದಿ ಸಂತಸ ವ್ಯಕ್ತಪಡಿಸಿದರು. ಶಿಬಿರದಲ್ಲಿ ಕಣ್ಣಿನ ಆರೋಗ್ಯ ಕುರಿತು ಜಾಗೃತಿ ಕಾರ್ಯಕ್ರಮವೂ ನಡೆಯಿತು. ನಿಯಮಿತ ಕಣ್ಣಿನ ತಪಾಸಣೆಯ ಮಹತ್ವ, ವೈದ್ಯರ ಸಲಹೆಯಂತೆ ಕನ್ನಡಕ ಬಳಕೆ, ವಾಹನ ಚಾಲನೆಯ ವೇಳೆ ಕಣ್ಣಿನ ಒತ್ತಡ ಕಡಿಮೆ ಮಾಡಿಕೊಳ್ಳುವ ವಿಧಾನಗಳು, ಮಧುಮೇಹ ಹಾಗೂ ರಕ್ತದೊತ್ತಡ ನಿಯಂತ್ರಣದಿಂದ ದೃಷ್ಟಿ ರಕ್ಷಣೆ ಸೇರಿದಂತೆ ಹಲವು ವಿಷಯಗಳ ಕುರಿತು ಸಿಬ್ಬಂದಿಗೆ ಅರಿವು ಮೂಡಿಸಲಾಯಿತು.

ಉತ್ತಮ ದೃಷ್ಟಿಯು ಸುರಕ್ಷಿತ ವಾಹನ ಚಾಲನೆಯ ಮೂಲಾಧಾರವಾಗಿದ್ದು, ಈ ಅಭಿಯಾನದ ಮೂಲಕ ಕೆಎಸ್‌ಆರ್‌ಟಿಸಿ ಸಿಬ್ಬಂದಿಯ ಆರೋಗ್ಯದ ಜೊತೆಗೆ ಸಾವಿರಾರು ಪ್ರಯಾಣಿಕರ ಸುರಕ್ಷತೆಯನ್ನೂ ಪರೋಕ್ಷವಾಗಿ ಕಾಪಾಡುವ ಕಾರ್ಯ ನಡೆದಿದೆ. ಅಭಿಯಾನಕ್ಕೆ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಮುಂದಿನ ದಿನಗಳಲ್ಲಿ ವಿವಿಧ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿಯೂ ಇಂತಹ ಸಮುದಾಯ ನೇತ್ರ ಆರೈಕೆ ಕಾರ್ಯಕ್ರಮಗಳನ್ನು ವಿಸ್ತರಿಸುವುದಾಗಿ ಡಾ. ಮೆಹರವಾಡೆ ಕಣ್ಣಿನ ಆಸ್ಪತ್ರೆ ತಿಳಿಸಿದೆ.

# ಗುರುಪೂರ್ಣಿಮೆ: ಪಾಂಡುರಂಗ ದೇವಸ್ಥಾನದಲ್ಲಿ ವಿಶೇಷ ಪೂಜೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ಮುಳಗುಂದ ಗ್ರಾಮದ ಪ್ರಸಿದ್ಧ ಪಾಂಡುರಂಗ ದೇವಸ್ಥಾನದಲ್ಲಿ ಗುರುಪೂರ್ಣಿಮೆ ಅಂಗವಾಗಿ ಎರಡು ದಿನಗಳ ಧಾರ್ಮಿಕ ಕಾರ್ಯಕ್ರಮಗಳನ್ನು ಭಕ್ತಿ, ಶ್ರದ್ಧೆ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ವಿಶೇಷ ಪೂಜೆ, ಆರತಿ ಹಾಗೂ ವಿವಿಧ ಧಾರ್ಮಿಕ ಕೈಂಕರ್ಯಗಳು ನೆರವೇರಿದವು. ಪಾರಂಪರಿಕ ಸಂಪ್ರದಾಯದಂತೆ ತಮ್ಮಣ್ಣವರ ಚಿನಿವಾಲರ ಕುಟುಂಬದವರು ಆರತಿ ಬೆಳಗುವ ಮೂಲಕ ಗುರುಪೂರ್ಣಿಮೆ ಆಚರಣೆಗೆ ವಿಶೇಷ ಮೆರುಗು ತಂದರು.

ಶ್ರೀಪಾದನಾಯಕ ತಮ್ಮಣ್ಣವರ ಚಿನಿವಾಲರ ಅವರು ಆರತಿ ಬೆಳಗಿಸಿ, ಲೋಕಕಲ್ಯಾಣ, ಸುಖ-ಶಾಂತಿ ಹಾಗೂ ಸಮಸ್ತ ಜನರ ಒಳಿತಿಗಾಗಿ ಪ್ರಾರ್ಥಿಸಿದರು. ಬಳಿಕ ದೇವಸ್ಥಾನದ ಅರ್ಚಕರಾದ ಗುಡಿಯವರು ಹಾಗೂ ಸಮಸ್ತ ವೈದಿಕರು ಭಕ್ತರಿಗೆ ಆಶೀರ್ವಚನ ನೀಡಿದರು.

ಗುರುಪೂರ್ಣಿಮೆ ಅಂಗವಾಗಿ ನಡೆದ ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಅಪಾರ ಸಂಖ್ಯೆಯ ಭಕ್ತರು ಭಾಗವಹಿಸಿ ದೇವರ ದರ್ಶನ ಪಡೆದು ಪುಣ್ಯಾರ್ಜನೆ ಮಾಡಿದರು.

# ಗದಗ ಉತ್ಸವ ಯಶಸ್ಸಿಗೆ ಸಹಕಾರ ಶರಣು ಮರಡಿಗೆ ಅಭಿನಂದನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ವತಿಯಿಂದ ಆಯೋಜಿಸಲಾದ ಗದಗ ಉತ್ಸವ2026ರ ಯಶಸ್ವಿ ಆಯೋಜನೆಗೆ ನೀಡಿದ ಅಮೂಲ್ಯ ಸಹಕಾರಕ್ಕಾಗಿ ಶರಣು ಮರಡಿ ಅವರನ್ನು ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಆತ್ಮೀಯವಾಗಿ ಅಭಿನಂದಿಸಿ, ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಮಾಜಿ ಅಧ್ಯಕ್ಷ ಮಧುಸೂದನ ಪುಣೇಕರ, ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಸಿಕಟ್ಟಿ, ಪದಾಧಿಕಾರಿಗಳಾದ ಜಯದೇವ ಮೆಣಸಗಿ, ಪ್ರಕಾಶ ಉಗಲಾಟದ, ಶಿದ್ರಾಮಪ್ಪ ಉಮಚಗಿ ಹಾಗೂ ಅಶೋಕ ಎಸ್. ಸಂಕಣ್ಣವರ ಉಪಸ್ಥಿತರಿದ್ದರು.


ಕರ್ನಾಟಕ ಸರ್ಕಾರ

**ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ**

ಹಿಂದಿನ ಹೆಸರು ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ

ಮುಳಗುಂದ ರಸ್ತೆ, ಮಲ್ಲಸಮುದ್ರ, ಗದಗ-582103

ದೂರವಾಣಿ ಸಂಖ್ಯೆ: 08372-200601 E-mail ID: gimsgadag@gmail.com

web: www.gimsgadag.karnataka.gov.in

ಸಂ. ಕೆಎಚ್‌ಪಿವೈವಿಸಂ/ಟೆಂಡರ್/Medical Kits/2026-27/113 ದಿನಾಂಕ: 31.07.2026

**ಇ-ಟೆಂಡರ್ ಪ್ರಕಟಣೆ**

ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಎಸ್.ಸಿ.ಪಿ/ಟಿ.ಎಸ್.ಪಿ ಎಮ್.ಬಿ.ಬಿ.ಎಸ್, ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳಿಗೆ Medical Kitsಗಳ ಅಂದಾಜು ರೂ. 11.73 ಲಕ್ಷಗಳ ಮೊತ್ತದ Medical Kitsಗಳ ಸರಬರಾಜಿಗಾಗಿ ಉತ್ಪಾದಕರಿಂದ, ಅಧಿಕೃತ ಮಾರಾಟಗಾರರಿಂದ ಹಾಗೂ Medical Kitsಗಳ ಸಂಸ್ಥೆಗಳಿಂದ ದ್ವಿ-ಲಕೋಟೆ ಪದ್ಧತಿಯಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಇ-ಟೆಂಡರ್ ಕರೆಯಲಾಗಿದ್ದು, **ದಿನಾಂಕ: 01.08.2026 ರಿಂದ ದಿನಾಂಕ: 19.08.2026 ರ ಸಾಯಂಕಾಲ 4:00 ಗಂಟೆವರೆಗೆ** ಇ-ಪೋರ್ಟಲ್ ಸಂಖ್ಯೆ: **DME/2026-27/IND2560** https://kppp.karnataka.gov.in ನಲ್ಲಿ ಟೆಂಡರ್ ಅಪ್‌ಲೋಡ್ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕರ್ತವ್ಯದ ದಿನಗಳಲ್ಲಿ ಕೆಳಗಡೆ ಸಹಿ ಮಾಡಿದವರ ಕಚೇರಿಗೆ ಸಂಪರ್ಕಿಸಬಹುದು.

ಸಹಿ/- ನಿರ್ದೇಶಕರು,
ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ

ವಾ.ಸಾ.ಸಂ.ಇ/ಗದಗ/186/
ದೇಶಪಾಂಡೆಪಬ್ಲಿಸಿಟಿ/2026-27


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka